# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –309 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 05–07–2025 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 309 | RNI No: KARKAN/2023/88462 | KA/SK/CTA-874/2024-2026 | Chitradurga | Date: 05-07-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸಹ ಶಿಕ್ಷಕರ ಮೇಲೆ ಕ್ರಮದ ಆದೇಶಕ್ಕೆ ಪ್ರತಿಭಟನೆ 2

ಪೋಷಕಾಂಶಗಳ ನಿರ್ವಹಣೆಯಿಂದ ಹೆಚ್ಚಿನ ಇಳುವರಿ, ಗುಣಮಟ್ಟ ಈರುಳ್ಳಿ ಉತ್ಪಾದನೆ 3

ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಸೇವೆ ಶ್ಲಾಘನೀಯ: ಚಂದ್ರಕಾಂತ ನಾಗಸಮುದ್ರ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಇಂದು ಅಲೆಮಾರಿಗಳ ಸಮಾವೇಶ ಸಭೆ

» **ಚಿತ್ರದುರ್ಗ**

ಪರಿಶಿಷ್ಟ ಜಾತಿಯಲ್ಲಿನ ಅಲೆಮಾರಿಗಳನ್ನು ಮುಖ್ಯವಾಹಿನಿಗೆ ತರಲು ಹಾಗೂ ಅವರ ಪ್ರಮುಖ ಬೇಡಿಕೆಗಳನ್ನು ಈಡೇರಿಸಲುರಾಜ್ಯಮಟ್ಟದ ಅಲೆಮಾರಿಗಳ ಸಮಾವೇಶಆಯೋಜಿಸಲು ಪೂರ್ವಭಾವಿ ಸಭೆಯನ್ನು ಬೆಂಗಳೂರಿನ ಗಾಂಧಿ ಭವನದಲ್ಲಿ ಜು.5 ಶನಿವಾರ ಬೆಳಗ್ಗೆ 10.30ಕ್ಕೆ ಆಯೋಜಿಸಲಾಗಿದೆ. ಮಾಜಿ ಸಚಿವ, ಅಲೆಮಾರಿ ಸಮುದಾಯದ ಹಿತಚಿಂತಕ ಹೆಚ್. ಆಂಜನೇಯ ನೇತೃತ್ವದಲ್ಲಿ ಪೂರ್ವಭಾವಿ ಆಯೋಜಿಸಿದ್ದು, ಸಭೆಯಲ್ಲಿಅಲೆಮಾರಿ ಸ 'ಮುದಾಯಎದುರಿಸುತ್ತಿರುವಜ್ವಲಂತ ಸಮಸ್ಯೆಗಳ ಕುರಿತುಚರ್ಚೆ ನಡೆಸಲಾಗುವುದು.ಜೊತೆಗೆ ಸಮಾವೇಶದ ದಿನಾಂಕ, ಸಮಾವೇಶಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅನೇಕ ಸಚಿವರು, ಜನಪ್ರತಿನಧಿಗಳನ್ನು ಆಹ್ವಾನಿಸುವ ಕುರಿತು ಸಮಾಲೋಚನೆ ನಡೆಸಲಾಗುವುದು. ಪರಿಶಿಷ್ಟ ಗುಂಪಿನಲ್ಲಿರುವ ಅಲೆಮಾರಿಗಳು ಅಸ್ಪೃಶ್ಯ ನೋವು ಜೊತೆಗೆ ನೆಲೆ ಇಲ್ಲದೆಅಲೆದಾಟದ ಬದುಕು ನಡೆಸುತ್ತಿದ್ದಾರೆ.ಈ ಸಮುದಾಯಕ್ಕೆ ನಿವೇಶನ, ಮನೆ, ಜಮೀನು, ಪ್ರತ್ಯೇಕ ಮೀಸಲಾತಿ, ಆರ್ಥಿಕ ನೆರವು, ಉದ್ಯೋಗ, ಶಿಕ್ಷಣ ಹೀಗೆ ವಿವಿಧ ಸೌಲಭ್ಯಗಳನ್ನು ಒದಗಿಸುವುದು ಆಳುವ ಸರ್ಕಾರದ ಹೊಣೆಗಾರಿಕೆಆಗಿದೆ. ಆದ್ದರಿಂದ ಈ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯಲು ಹಾಗೂ ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರದ ಮೇಲೆ ಒತ್ತಡತರಲು ಹೆಚ್.ಆಂಜನೇಯ ನೇತೃತ್ವದಲ್ಲಿ ಸಮಾವೇಶದ ಪೂರ್ವಭಾವಿ ಆಯೋಜಿಸಲಾಗಿದೆ. ರಾಜ್ಯದ ವಿವಿಧೆಡೆ ನೆಲೆಸಿರುವ ನೈಜಅಲೆಮಾರಿ 49 ಜಾತಿಗಳ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು ಪಾಲ್ಗೊಂಡು ಸಲಹೆ, ಸೂಚನೆ ನೀಡಬೇಕೆಂದು ಸಂಘಟಕರಾದ ಶಾಂತಕುಮಾರ್, ಸಣ್ಣಮಾರಪ್ಪಕೋರಿದ್ದಾರೆ.

### ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

2025–26ನೇ ಸಾಲಿಗೆ ಬಿ.ಎಸ್‌ಸಿ ನರ್ಸಿಂಗ್ ಮತ್ತು ಜಿಎನ್‌ಎಂ ನರ್ಸಿಂಗ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in/sevasindhu/departmentservices ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಲು ಸೂಚಿಸಿದೆ.

**ಅರ್ಹತೆಗಳು:** ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಕೋರ್ಸ್‌ನ ಅವಧಿ ಪೂರ್ಣಾವಧಿ. ವಿದ್ಯಾರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ವಿದ್ಯಾರ್ಥಿಗಳನ್ನು ಅನುದಾನದ ಲಭ್ಯತೆಯ ಅನುಸಾರ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ವಿದ್ಯಾರ್ಥಿಗಳು ಈ ಯೋಜನೆಯಡಿ ಉತ್ತೇಜನ ಮೊತ್ತವನ್ನು ಪಡೆಯಲು ಪ್ರತಿ ಶೈಕ್ಷಣಿಕ ವರ್ಷದಲ್ಲಿ ಹೊಸ ಅರ್ಜಿಗಳನ್ನು ಸಲ್ಲಿಸಬೇಕು. ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ ಸಿಡಿಂಗ್ ಆಗಿರುವ ಬಗ್ಗೆ ಹಾಗೂ ಎನ್‌ಪಿಸಿಐ ಮ್ಯಾಪಿಂಗ್ ಆ್ಯಕ್ಟಿವ್ ಆಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಇಂದು ತರಬೇತಿ

» **ಹೊಸದುರ್ಗ**

ಕಾನೂನು ಸಾಕ್ಷರತಾ ಸಮಿತಿ, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲೆ ವಿಭಾಗ) ಹೊಸದುರ್ಗವತಿಯಿಂದಪಟ್ಟಣದಜ್ಞಾನಕೇಂದ್ರದಲ್ಲಿ ಜುಲೈ 5 ರಂದು ಶನಿವಾರ ಬೆಳಿಗ್ಗೆ 10.30 ಕ್ಕೆ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಅಧ್ಯಯನ ಕೌಶಲ್ಯಗಳ ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು ಎಸ್.ಡಿ.ಎಂ.ಸಿ ಅಧ್ಯಕ್ಷ ಅಬ್ದುಲ್‌ಪಾಷ ಅಧ್ಯಕ್ಷತೆ ವಹಿಸಲಿದ್ದಾರೆ. ಚಿತ್ರದುರ್ಗ ಸರ್ಕಾರಿ ಕಲಾ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಮುರುಳೀಧರ ಬಿ. ವಿಶೇಷ ಉಪನ್ಯಾಸ ನೀಡಲಿದ್ದು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ಹೆಚ್.ಬಿಲ್ಲಪ್ಪ ಉದ್ಘಾಟನೆ ಮಾಡಲಿದ್ದಾರೆ.

# ತುರುವನೂರು ಹೋಬಳಿಯ ಸಮಗ್ರ ಅಭಿವೃದ್ಧಿ ನನ್ನ ಚಿಂತನೆ: ರಘುಮೂರ್ತಿ

» **ಚಿತ್ರದುರ್ಗ**

ತುರುವನೂರು ಹೋಬಳಿಯ ಸಮಗ್ರ ಅಭಿವೃದ್ಧಿಗೆ ಹಂತ ಹಂತವಾಗಿ ಮಾಡುತ್ತಿದ್ದು ಸುಮಾರು 3 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳು ಮಾಡಲಾಗುತ್ತಿದೆ ಎಂದು ಚಳ್ಳಕೆರೆ ಶಾಸಕ ಹಾಗೂ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಗ ಚಿಕ್ಕಗೊಂಡನಹಳ್ಳಿ ಗ್ರಾಮದಲ್ಲಿ ಗುರುವಾರ ಸಂಜೆ ರಸ್ತೆ ಕಾಮಗಾರಿ ಮತ್ತು ಭವನ, ಸಿ.ಸಿ.ರಸ್ತೆ ಕಾಮಗಾರಿಗಳಿಗೆ ಪೂಜೆ ಸಲ್ಲಿಸಿ ಮಾತನಾಡಿದರು.

ತುರುವನೂರು ಹೋಬಳಿಯ ಸಮಗ್ರ ಅಭಿವೃದ್ಧಿ ನನ್ನ ಚಿಂತನೆಯಾಗಿದ್ದ ಎಲ್ಲಾ ಕಾಮಗಾರಿಗಳು ಸಹ ಚಾಲ್ತಿಯಲ್ಲಿದ್ದು ಮುಂದಿನ ದಿನದಲ್ಲಿ ಹೋಬಳಿಯ ಸಂಪೂರ್ಣ ಚಿತ್ರಣ ಬದಲಾಗಲಿದೆ ಎಂದರು.

ತುರುವನೂರು ಹೋಬಳಿಯ ಚಿಕ್ಕಗೊಂಡನಹಳ್ಳಿ ಗ್ರಾಮದಲ್ಲಿ ಮುಖ್ಯಮಂತ್ರಿ ವಿಶೇಷ ಪ್ರದೇಶಾಭಿವೃದ್ಧಿ ಯೋಜನೆಯಡಿ ಸುಮಾರು 2 ಕೋಟಿ ವೆಚ್ಚದಲ್ಲಿ ಚಿಕ್ಕಗೊಂಡನಹಳ್ಳಿ ಗ್ರಾಮದಿಂದ ಚಿಕ್ಕಪ್ಪನಹಳ್ಳಿ ಗ್ರಾಮದವರೆಗೆ ಸಂಪರ್ಕ ರಸ್ತೆಯ ಡಾಂಬರೀಕರಣ ಮಾಡಲಾಗುತ್ತಿದ್ದು ಗುಣಮಟ್ಟದ ಕಾಮಗರಿಗೆ ಒತ್ತು ನೀಡಲು ಇಂಜಿನಿಯರ್ ಗೆ ಮತ್ತು ಗುತ್ತಿಗೆದಾರನಿಗೆ ಸೂಚನೆ ನೀಡಿದ್ದೇನೆ.

ಚಿಕ್ಕಗೊಂಡನಹಳ್ಳಿ ಬೆಸ್ತರ ಕಾಲೋನಿಯಲ್ಲಿ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ನಿರ್ಮಿಸಲಾಗಿದ್ದ ಶುದ್ಧ ನೀರಿನ ಘಟಕ ಉದ್ಘಾಟನೆ ಮಾಡಿದ್ದು ಉತ್ತಮವಾಗಿ ಮತ್ತು ವ್ಯವಸ್ಥಿತವಾಗಿ ನಿರ್ವಹಣೆ ಮಾಡಲ ಗ್ರಾಮ ಪಂಚಾಯತಿ ಅವರಿಗೆ ತಿಳಿಸಿದ್ದೇನೆ ಎಂದರು.

ಚಿಕ್ಕಗೊಂಡನಹಳ್ಳಿ ಗ್ರಾಮದ ಬೆಸ್ತರ ಕಾಲೋನಿಯಲ್ಲಿ ಸುಮಾರು 10 ಲಕ್ಷ. ರೂಗಳ ವೆಚ್ಚದಲ್ಲಿ ಸಮುದಾಯ ಭವನ, ಎಸ್.ಸಿ ಕಾಲೋನಿಯಲ್ಲಿ 10 ಲಕ್ಷ ರೂಗಳ ವೆಚ್ಚದಲ್ಲಿ ಕೊಲ್ಲಾಪುರದಮ್ಮ ದೇವಸ್ಥಾನ ಕಟ್ಟಡ ಮತ್ತು ಜಿಲ್ಲಾ ಖನಿಜ ಪ್ರತಿಷ್ಠಾನ ಯೋಜನೆಯಡಿ 65 ಲಕ್ಷ ರೂ ವೆಚ್ಚದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡ ನಿರ್ಮಾಣ ಹಾಗೂ 10 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ, ಕಾಮಗಾರಿಗಳ ಭೂಮಿ ಪೂಜೆ ನೇರವೇರಿಸಿದ್ದು ತುರ್ತಾಗಿ ಅಚ್ಚುಕಟ್ಟಾಗಿ ಕಾಮಗಾರಿ ಮಾಡಲಾಗುತ್ತದೆ.

ತುರುವನೂರು ಗ್ರಾಮದಲ್ಲಿ ರಸ್ತೆ ಅಗಲೀಕರಣ, ಗಾಂಧಿ ಪಾರ್ಕ್, ಮೊರಾರ್ಜಿ ಶಾಲೆಗಳ ಅಭಿವೃದ್ಧಿ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಮಹಾಂತಮ್ಮ, ಉಪಾಧ್ಯಕ್ಷ ಗಂಗಾಧರ, ಜಿಲ್ಲಾ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಬಾಬುರೆಡ್ಡಿ, ಜಿಲ್ಲಾ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರಾದ ಜಿ.ಟಿ.ಬಾಬುರೆಡ್ಡಿ,ಮಾಜಿ ತಾಲ್ಲೂಕು ಪಂಚಾಯ್ತಿ ಸದಸ್ಯರಾದ ತಿಪ್ಪೇಸ್ವಾಮಿ, ಗ್ರಾಮ ಪಂಚಾಯಿತಿ ಮುಖಂಡರಾದ ಗಟ್ಟಿ ಓಬಯ್ಯ , ತಿಪ್ಪೇಸ್ವಾಮಿ,ದಾಸಪ್ಪ, ರಾಘವೇಂದ್ರ, ನಾಗರಾಜ, ಚಿದಾನಂದಮೂರ್ತಿ, ಮಲ್ಲಿಕಾರ್ಜುನ, ರವಿ, ಹರೀಶ್ ಇದ್ದರು.









## ಪ್ರಮುಖ ಸುದ್ದಿ

### ಸಾರ್ವತ್ರಿಕಚುನಾವಣೆಯಂತೆಯೇ ಮತದಾನ: ಎಲೆಕ್ಷನ್‌ಅರಿವು ಪಡೆದ ವಿದ್ಯಾರ್ಥಿಗಳು

# ಡಿಜಿಟಲ್ ಮಾದರಿಯಲ್ಲಿ ಶಾಲಾ ಸಂಸತ್‌ಚುನಾವಣೆ

» **ಪರಶುರಾಂಪುರ**

ಮತದಾನದಚೀಟಿಯ ಮೂಲಕ ಮತ ಚಲಾಯಿಸುವ ಪ್ರಕ್ರಿಯೆ ಈ ಹಿಂದೆ ಸಾರ್ವತ್ರಿಕಚುನಾವಣೆಯಲ್ಲಿಯೂ ನಡೆಯುತ್ತಿತ್ತು.ಆದರೆ ಬದಲಾದಕಾಲಘ 'ಟ್ಟದಲ್ಲಿಚುನಾವಣಾಆಯೋಗವು ಇವಿಎಂ ಮಷೀನ್ ಗಳ ಮೂಲಕ ಚುನಾವಣಾ ಪ್ರಕ್ರಿಯೆಗಳನ್ನು ಕೈಗೊಂಡಿರುವುದನ್ನಇಲ್ಲಿ ಗಮನಿಸಬಹುದಾಗಿದೆ.

ಡಿಜಿಟಲ್‌ತಂತ್ರಜ್ಞಾನಕ್ಕೆ ಹೊಂದಿ ಕೊಳ್ಳುವ ಹಾಗೂ ವಿದ್ಯಾರ್ಥಿಗಳಿಗೆ ಸಾರ್ವತ್ರಿಕಚುನಾವಣಾ ಇವಿಎಂ ಮಾದರಿಯಲ್ಲಿಯೇಚುನಾವಣೆ ನಡೆಸುವ ಪ್ರಯತ್ನಕ್ಕೆತಾಲೂಕಿನಗಡಿಭಾಗದ ಸರ್ಕಾರಿ ಪ್ರೌಢಶಾಲೆಯ ಶಾಲಾ ಸಮಿತಿಯಎಲ್ಲಾ ಪದಾಧಿಕಾರಿಗಳು ಹಾಗೂ ಶಾಲೆಯ ಹಳೇ ವಿದ್ಯಾರ್ಥಿಗಳ ಸಂಘದಎಲ್ಲಾ ಪದಾಧಿಕಾರಿಗಳು ಸಹಭಾಗಿತ್ವದಲ್ಲಿ ನಡೆಯಿತು.

ಸರ್ಕಾರಿ ಪ್ರೌಢಶಾಲೆ ಓಬಳಾಪುರ ಕೇಂದ್ರದಲ್ಲಿ 2025–26 ನೇ ಸಾಲಿನ ಶಾಲಾ ಸಂಸತ್ ನ ಮುಖ್ಯಮಂತ್ರಿ, ಕ್ರೀಡಾ ಮಂತ್ರಿ ಹಾಗೂ ಸಾಂಸ್ಕೃತಿಕ ಮಂತ್ರಿಗಳ ಆಯ್ಕೆ ಪ್ರಕ್ರಿಯೆಗಾಗಿಚುನಾವಣೆ ಹಮ್ಮಿಕೊಳ್ಳಲಾಗಿತ್ತು. ಪ್ರತೀ ಸ್ಥಾನಕ್ಕೆ ಮೂವರು ಸ್ಪರ್ಧಿಗಳು ಸ್ಪರ್ಧೆಯಲ್ಲಿದ್ದರು.ಸುಮಾರು 150 ವಿದ್ಯಾರ್ಥಿಗಳು ಈ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿದರು.

8ನೇತರಗತಿ, ಒಂಬತ್ತನೇತರಗತಿ ಹಾಗೂ ಹತ್ತನೆಯತರಗತಿಯ ವಿದ್ಯಾರ್ಥಿಗಳು ಅತ್ಯುತ್ಸಾಹದಲ್ಲಿ ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಂಡು, ಚುನಾವಣಾ ಪ್ರಕ್ರಿಯೆಯಾವರೀತಿಯಲ್ಲಿ ನಡೆಯಲಿದೆ ಎಂಬುದರಅರಿವನ್ನೂ ಪಡೆದರು.

ಡಿಜಿಟಲ್ ಮಾದರಿಯಲ್ಲಿ ನಡೆದಚುನಾವಣಾ ಪ್ರಕ್ರಿಯೆಯಲ್ಲಿ ಸ್ಪರ್ಧಾಳುಗಳ ಭಾವಚಿತ್ರ ಸಹಿತ ಬೆಲೆಟ್ ಗಳು ಕಾಣುವಂತೆ ಮಾಡಲಾಗಿತ್ತು. ವಿದ್ಯಾರ್ಥಿಗಳು ತಮ್ಮಆಯ್ಕೆಯಗುರುತನ್ನು ಚಲಾಯಿಸಿದರು. ವಿದ್ಯಾರ್ಥಿಗಳ ಎಡಗೈತೋರು ಬೆರಳಿಗೆ ಚುನಾವಣಾ ಪ್ರಕ್ರಿಯೆ ನಡೆದ ಬಗ್ಗೆ ಶಾಯಿ ಹಚ್ಚುವುದರ ಮೂಲಕ ಹಾಗೂ ಮತದಾನ ಪ್ರಕ್ರಿಯೆಗೆ ಬಂದಸಂದರ್ಭದಲ್ಲಿಅವರದಾಖಲೆಗಳನ್ನು ಪರಿಶೀಲಿಸಿ, ಗುರುತು ಮಾಡಿಕೊಳ್ಳುವ ಮೂಲಕ ಸಾರ್ವತ್ರಿಕಚುನಾವಣಾ ಮಾದರಿಯನ್ನೇ ಪಾಲಿಸಲಾಗಿತ್ತು.

ಸ್ಪರ್ಧಾಳುಗಳಿಗೆ ಕ್ಷಣಕ್ಷಣದಅಪ್ಡೇಟ್ ಲಭ್ಯವಾಗುವಂತೆ ಮಾಡಲಾಗಿತ್ತು. ಡಿಜಿಟಲ್ ಸ್ಕ್ರೀನ್ ಮೂಲಕ ವಿದ್ಯಾರ್ಥಿಗಳು ತಾವು ಪಡೆದ ಓಟುಗಳ ಲೆಕ್ಕವನ್ನು ಪರಿಶೀಲಿಸಿದರು.

ಮುಖ್ಯ ಶಿಕ್ಷಕ ಹನುಮಂತಪ್ಪ, ಶಿಕ್ಷಕ ನಾಗರಾಜ್,ಅತಿಥಿ ಶಿಕ್ಷಕರ ಸಹಭಾಗಿತ್ವದಲ್ಲಿ ಶಾಲಾ ಸಂಸತ್‌ಚುನಾವಣೆಯನ್ನು ನಡೆಸಲಾಯಿತು.











## ಫಾಸ್ಟ್ ನ್ಯೂಸ್

### ಜು.06ಕ್ಕೆ ಮಾಜಿ ಸೈನಿಕರ ಕುಂದುಕೊರತೆ ಸಭೆ

» **ಚಿತ್ರದುರ್ಗ**

ಶಿವಮೊಗ್ಗ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಸರ್ಕಾರಿ ನೌಕರರ ಭವನದಲ್ಲಿ ಇದೇ ಜುಲೈ 06ರಂದು ಬೆಳಿಗ್ಗೆ 10.30ಕ್ಕೆ ಮಾಜಿ ಸೈನಿಕರ ಕುಂದುಕೊರತೆ ಸಭೆ ಆಯೋಜಿಸಲಾಗಿದೆ. ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ನಿರ್ದೇಶಕರು ಕುಂದುಕೊರತೆ ಸಭೆಗೆ ಆಗಮಿಸಿ, ಮಾಜಿ ಸೈನಿಕರ ಅಹವಾಲು ಆಲಿಸುವರು. ಶಿವಮೊಗ್ಗ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳ ವ್ಯಾಪ್ತಿಯ ಮಾಜಿ ಸೈನಿಕರು, ಅವರ ಅವಲಂಬಿತರು, ವೀರನಾರಿಯರು ಹಾಗೂ ವಿವಿಧ ಮಾಜಿ ಸೈನಿಕರ ಸಂಘಟನೆಗಳ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದು, ತಮ್ಮ ಕುಂದುಕೊರತೆಗಳ ಕುರಿತಂತೆ ಖುದ್ದಾಗಿ ನಿರ್ದೇಶಕರನ್ನು ಭೇಟಿಯಾಗಿ ಮನವಿ ಸಲ್ಲಿಸಬಹುದು. ಕುಂದುಕೊರತೆಗಳನ್ನು ಇದೇ ಜುಲೈ 05ರ ಸಂಜೆ 5 ಗಂಟೆಯೊಳಗಾಗಿ soldiersshimoga@gmail.com ಗೆ ಮಿಂಚಂಚೆ ಮೂಲಕವೂ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08182220925 ಅನ್ನು ಸಂಪರ್ಕಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ಜು.6 ರಂದು ಪ್ರೊ.ಬಿ.ಕೃಷ್ಣಪ್ಪನವರ ಜನ್ಮದಿನ ಆಚರಣೆ

» **ಚಿತ್ರದುರ್ಗ**

ಸಾಮಾಜಿಕ ಸಂಘರ್ಷ ಸಮಿತಿ-ಚಿತ್ರದುರ್ಗ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ನೌಕರರ ಒಕ್ಕೂಟ ತುಮಕೂರು ಸಹಯೋಗದೊಂದಿಗೆ ಜು.6 ರಂದು ಬೆಳಿಗ್ಗೆ 11 ಗಂಟೆಗೆ ವಿಜ್ಞಾನ ಕಾಲೇಜು ಎದುರು ಆದಿ ಕರ್ನಾಟಕ ಹಾಸ್ಟೆಲ್‌ನಲ್ಲಿ ಪ್ರೊ.ಬಿ.ಕೃಷ್ಣಪ್ಪನವರ ಜನ್ಮದಿನ ಧೃವಿಕೃತ ದಲಿತ ಚಳುವಳಿಯ ಕಟ್ಟುವಿಕೆ ದಿನ ಆಚರಿಸಲಾಗುವುದು. ಲಲಿತ ಕಲಾ ಅಕಾಡೆಮಿ ಮಾಜಿ ಅಧ್ಯಕ್ಷ ಸಿ.ಚಂದ್ರಶೇಖರ್ ಜನ್ಮದಿನ ಉದ್ಘಾಟಿಸುವರು. ಸಾಮಾಜಿಕ ಸಂಘರ್ಷ ಸಮಿತಿ ಅಧ್ಯಕ್ಷ ಕೆ.ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಾಮಾಜಿಕ ನ್ಯಾಯಕ್ಕಾಗಿ ಒಳ ಮೀಸಲಾತಿ ಹೋರಾಟ ಸಮಿತಿಯ ಪ್ರಧಾನ ಸಂಚಾಲಕ ಎಸ್.ಮಾರೆಪ್ಪ, ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಡಿ.ದುರುಗೇಶಪ್ಪ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ನೌಕರರ ಒಕ್ಕೂಟದ ರಾಜ್ಯಾಧ್ಯಕ್ಷ ಹಿರೇಹಳ್ಳಿ ಮಲ್ಲಿಕಾರ್ಜುನ್, ಉಪಾಧ್ಯಕ್ಷ ಬಸವನಾಳ್, ಸೂಳ್ಯಾ ಜಿಲ್ಲೆ ಅರಣ್ಯಾಧಿಕಾರಿ ನಂದಗೋಪಾಲ್, ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿ.ಎ.ಚಿಕ್ಕಣ್ಣ, ಸಾಹಿತಿ ದು.ಸರಸ್ವತಿ, ಶಂಕರ್, ನಿವೃತ್ತ ಪ್ರಾಚಾರ್ಯರಾದ ವಿ.ಬಸವರಾಜ್, ಎಂ.ಡಿ.ರವಿ, ಇಮ್ತಿಯಾಜ್ ಹುಸೇನ್ ಇನ್ನು ಅನೇಕರು ಪಾಲ್ಗೊಳ್ಳಲಿದ್ದಾರೆ.

### ಬಳಕೆದಾರರ ಪತ್ತಿನ ಸಹಕಾರ ಸಂಘ ಸರ್ವಸದಸ್ಯರ ಸಭೆ

» **ಚಳ್ಳಕೆರೆ**

ಚಳ್ಳಕೆರೆ ಟೌನ್ ಬಳಕೆದಾರರ ಪತ್ತಿನ ಸಹಕಾರ ಸಂಘದ 2024-25ನೇ ಸಾಲಿನ ಸರ್ವಸದಸ್ಯರ ಸಭೆ ಜುಲೈ-11ರ ಶುಕ್ರವಾರ ಬೆಳಗ್ಗೆ10ಕ್ಕೆ ಅಧ್ಯಕ್ಷ ಬಿ.ವಿ.ಶ್ರೀನಿವಾಸ್‌ರಾಜ್ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಪ್ರಭಾರ ವ್ಯವಸ್ಥಾಪಕ ಆರ್.ಎಂ.ನಜೀಮ್ ತಿಳಿಸಿದ್ದಾರೆ. ಸಹಕಾರಿ ಸಂಘದ ನಿರ್ದೇಶಕರು, ಶೇರುದಾರರು, ಸರ್ವಸದಸ್ಯರು ತಪ್ಪದೆ ಹಾಜರಾಗುವಂತೆ ಮನವಿ ಮಾಡಿದ್ದಾರೆ.

### ಕ್ರೀಡಾ ಸಾಮಾಗ್ರಿಗಳ ಸರಬರಾಜಿಗೆ ಯುವ ಸಂಘಗಳಿಂದ ಅರ್ಜಿ

» **ದಾವಣಗೆರೆ**

ಪ್ರಸಕ್ತ ಸಾಲಿನ ಯುವ ಚೈತನ್ಯ ಕಾರ್ಯಕ್ರಮದಡಿ ಕ್ರೀಡಾ ಕಿಗಳನ್ನು ಸರಬರಾಜು ಮಾಡಲು ಯುವಕ, ಯುವತಿಯರ ಸಂಘಗಳಿಂದ ಸೇವಾ ಸಿಂಧೂ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು. ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಜುಲೈ 22 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ದಾವಣಗೆರೆ ದೂ.ಸಂ: 08192-237480 ನ್ನು ಸಂಪರ್ಕಿಸಿ.

### ನೂತನ ಎಡಿಸಿ ಶೀಲವಂತ ಶಿವಕುಮಾರ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯ ನೂತನ ಅಪರ ಜಿಲ್ಲಾಧಿಕಾರಿ ಹುದ್ದೆಯ ಪ್ರಭಾರವನ್ನು ಶೀಲವಂತ ಶಿವಕುಮಾರ ಜೂನ್ 27 ರಂದು ವಹಿಸಿಕೊಂಡಿರುತ್ತಾರೆ. ಅವರ ಕಚೇರಿಗೆ ಸಂಬಂಧಿಸಿದಂತೆ ವೈಯಕ್ತಿಕ ಗಮನ ಸೆಳೆಯಬಹುದಾದ ಅರೆ ಸರ್ಕಾರಿ, ಸರ್ಕಾರಿ ಪತ್ರಗಳನ್ನು ಅವರ ಹೆಸರಿನಲ್ಲಿ ಅಪರ ಜಿಲ್ಲಾಧಿಕಾರಿ ಹಾಗೂ ಅಪರ ದಂಡಾಧಿಕಾರಿ, ಜಿಲ್ಲಾಧಿಕಾರಿಗಳ ಕಚೇರಿ ವಿಳಾಸಕ್ಕೆ ಕಳುಹಿಸಲು ಹಾಗೂ ಸಂಪರ್ಕಕ್ಕಾಗಿ ದಾವಣಗೆರೆ ದೂ.ಸಂ ಹಾಗೂ ಫ್ಯಾಕ್ಸ್ ಸಂ: 08192-257778, ಇ-ಮೇಲ್ ವಿಳಾಸ: deo.davanagere@gmail.com ಮೇಲ್ ಮೂಲಕವೂ ಸಂಪರ್ಕಿಸಬಹುದು.

# ಕಣ್ಣಿನ ಆರೈಕೆ ಬಗ್ಗೆ ಗಮನಹರಿಸಿ: ಗಿರೀಶ್

» **ಚಿತ್ರದುರ್ಗ**

ಕಣ್ಣು ಅತ್ಯಂತ ಅಮೂಲ್ಯ ಅಂಗವಾಗಿದೆ. ಎಲ್ಲರೂ ಕಣ್ಣಿನ ಆರೈಕೆ ಬಗ್ಗೆ ಗಮನಹರಿಸಬೇಕು ಎಂದು ತಾಲ್ಲೂಕು ವೈದ್ಯಾಧಿಕಾರಿ ಗಿರೀಶ್ ಸಲಹೆ ನೀಡಿದರು.

ಚಿತ್ರದುರ್ಗ ತಾಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಶುಕ್ರವಾರ ಆಶಾಕಿರಣ ದೃಷ್ಟಿ ಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು.

ಕಣ್ಣಿನ ಸೋಂಕು, ಮಿಟಮಿನ್ ಎ ಕೊರತೆ, ಕಣ್ಣಿ ಪೊರೆ ಸೇರಿದಂತೆ ದೃಷ್ಟಿದೋಷ ಉಳ್ಳವರಿಗೆ ಆಶಾಕಿರಣ ದೃಷ್ಟಿ ಕೇಂದ್ರದಲ್ಲಿ ಪರೀಕ್ಷೆ ಮಾಡಲಾಗುವುದು. ಅರ್ಹರಿಗೆ ಉಚಿತ ಕನ್ನಡಕ ವಿತರಣೆ ಹಾಗೂ ಆಶಾ ಕಿರಣ ಕಾರ್ಯಕ್ರಮದಡಿ ಕಣ್ಣಿನ ಶಸ್ತ್ರಚಿಕಿತ್ಸೆ ಸಹ ಮಾಡಲಾಗುವುದು. ಎಲ್ಲಾ ಜಿಲ್ಲಾ ಹಾಗೂ ಆಸ್ಪತ್ರೆ, ತಾಲ್ಲೂಕು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಆಶಾಕಿರಣ ದೃಷ್ಟಿ ಕೇಂದ್ರ ತೆರೆಯಲಾಗಿದ್ದು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.



ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಸರ್ಕಾರದಿಂದ ರಾಜ್ಯದಲ್ಲಿ 393 ಆಶಾಕಿರಣ ದೃಷ್ಟಿ ಕೇಂದ್ರ ಪ್ರಾರಂಭಿಸಲಾಗಿದೆ. ಆಶಾಕಿರಣ ಕಾರ್ಯಕ್ರಮದ ಕುರಿತು ವಿಶ್ವ ಆರೋಗ್ಯ ಸಂಸ್ಥೆ ಪ್ರಶಂಸಿದೆ. ಈ ಕುರಿತು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಂತಸ ವ್ಯಕ್ತಪಡಿಸಿದ್ದಾರೆ ಎಂದರು.

ಸಿರಿಗೆರೆ ಗ್ರಾ.ಪಂ.ಅಧ್ಯಕ್ಷೆ ರೂಪ ಪ್ರದೀಪ್ ಮಾತನಾಡಿ, ಸರ್ಕಾರ ಕಣ್ಣಿನ ಆರೈಕೆ ಹಿತದೃಷ್ಟಿಯಿಂದ ಆಶಾಕಿರಣದಂತ ಬೃಹತ್ ಕಾರ್ಯಕ್ರಮ ಪ್ರಾರಂಭಿಸಿರುವುದು ಮೆಚ್ಚುಗೆಯ ವಿಷಯವಾಗಿದೆ ಎಂದರು.

ದೃಷ್ಟಿದೋಷ ಮುಕ್ತ ಕರ್ನಾಟಕ ನಿರ್ಮಾಣ ಮಾಡಲು ಅರ್ಹ ಫಲಾನುಭವಿಗಳು ಪರೀಕ್ಷೆಗೊಳಪಟ್ಟು ಯೋಜನೆಯ ಯಶಸ್ವಿಗೆ ಕೈಜೋಡಿಸಬೇಕೆಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಹೇಳಿದರು. ಈ ವೇಳೆ ಹೆರಿಗೆ ಮತ್ತು ಸ್ತ್ರೀರೋಗ ತಜ್ಞೆ ಡಾ.ಪವಿತ್ರ, ಆಯುಷ್ ವೈದ್ಯಾಧಿಕಾರಿ ಡಾ.ಶಿಲ್ಪ, ದಂತ ವೈದ್ಯಾಧಿಕಾರಿ ಡಾ.ಬಿಂದಿಯಾ, ಹಿರಿಯ ಫಾರ್ಮಸಿ ಅಧಿಕಾರಿ ಮೋಹನ್ ಕುಮಾರ್, ಪ್ರಥಮ ದರ್ಜೆ ಸಹಾಯಕಿ ಮಂಜುಳಾ, ನೇತ್ರಾಧಿಕಾರಿ ಬರ್ಕತ್ ಅಲಿ, ಎಕ್ಸರೇ ಟೆಕ್ನಿಷಿಯನ್ ಪ್ರದೀಪ್ ಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣಕುಮಾರ್, ಸುನಿಲ್‌ಕುಮಾರ್ ಶುಶ್ರೂಷಾಧಿಕಾರಿಗಳಾದ ನಾಗವೇಣಿ, ಜ್ಯೋತಿ, ರೇಣುಕಾ, ಶ್ಯಾಮಲ, ಆಪ್ತ ಸಮಾಲೋಚಕಿ ಕಾವ್ಯ, ಆಶಾ ಕಾರ್ಯಕರ್ತೆರಾದ ಉಮಾದೇವಿ, ವನಜಾಕ್ಷಮ್ಮ,ಆಶಾಕಿರಣಫಲಾನುಭವಿಗಳು ಸಾರ್ವಜನಿಕರು ಹಾಜರಿದ್ದರು.

# ದೇವನಹಳ್ಳಿಯಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಕೂಡಲೇ ವಾಪಸ್ ಪಡೆಯಬೇಕು: ಜಿಬಿವಿ

» **ಬೆಂಗಳೂರು**

ದೇವನಹಳ್ಳಿಯಲ್ಲಿರೈತರಭೂಮಿಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುವುದು ಸರಿಯಲ್ಲ. ಕೈಗಾರಿಕೆ ಬೆಳೆದರೆ ಅಭಿವೃದ್ಧಿಯಾಗುತ್ತದೆ. ಹಾಗಾಗಿ ಯೋಜನೆ ಮಾಡುವುದು ತಪ್ಪಲ್ಲ. ಆದ್ರೆ, ರಾಜ್ಯ ಸರ್ಕಾರವು ರೈತರ ಭೂಮಿಯನ್ನು ಯಾವುದೇ ಕಾರಣಕ್ಕೂ ಒತ್ತಾಯ ಹಾಗೂ ಬಲವಂತವಾಗಿ ಭೂ ಸ್ವಾಧೀನ ಮಾಡಬಾರದು. ರೈತರೇ ಸ್ವಯಂಪ್ರೇರಿತರಾಗಿ ಭೂಮಿ ಕೊಡುವವರೆಗೆ ನಿರ್ಧಾರ ಹಿಂಪಡೆಯಬೇಕು ಎಂದು ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಒತ್ತಾಯಿಸಿದ್ದಾರೆ.

ದೇವನಹಳ್ಳಿ ವಿಮಾನ ನಿಲ್ದಾಣ ಮತ್ತು ಚನ್ನರಾಯಪಟ್ಟಣದ ಮಧ್ಯೆ ಬರುವ 1777 ಎಕರೆ ರೈತರ ಜಮೀನನ್ನು ಕರ್ನಾಟಕ ಕೈಗಾರಿಕಾಭಿವೃದ್ಧಿ ಮಂಡಳಿ ಭೂ ಸ್ವಾಧೀನ ಪಡಿಸಿಕೊಳ್ಳಲು ನೋಟೀಸ್ ಕೊಟ್ಟಿದೆ. ಭೂ ಸ್ವಾಧೀನ ಪ್ರಕ್ರಿಯೆ ನಡೆಯುತ್ತಿದೆ. ಏರೋ ಸ್ಪೇಸ್ ಗಾಗಿ ಹತ್ತಿರದಲ್ಲಿ ಭೂಮಿ ಇರುವ ಕಾರಣಕ್ಕೆ ಸ್ವಾಧೀನಪಡಿಸಿಕೊಳ್ಳಬೇಕು ಎಂಬುದು ಸರ್ಕಾರದ ಚಿಂತನೆಯಾಗಿದೆ. ರೈತರನ್ನು ಒಕ್ಕಲೆಬ್ಬಿಸಿ ಬಲವಂತದಿಂದ ಭೂ ಸ್ವಾಧೀನ



ಮಾಡುತ್ತಿರುವುದು ಘೋರ ಅನ್ಯಾಯ. ಈ ಕ್ರಮದಿಂದ ಸರ್ಕಾರದ ಮೇಲಿರುವ ವಿಶ್ವಾಸ ಕಳೆದುಹೋಗುತ್ತದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ.

ಭೂ ಸ್ವಾಧೀನ ಪ್ರಕ್ರಿಯೆ ಕುರಿತಂತೆ ಹಲವು ವರದಿಗಳು ಬಂದಿವೆ. ಭೂ ಒಡೆಯರು ಕೂಲಿ ಕಾರ್ಮಿಕರಾಗಿದ್ದಾರೆ. ಚಿಕ್ಕಪುಟ್ಟ ಭೂಮಿ ಇದೆ. ಸರ್ಕಾರ ಬಲವಂತವಾಗಿ ಭೂ ಸ್ವಾಧೀನಪಡಿಸಿಕೊಳ್ಳಲು ಮುಂದಾಗಿದ್ದು, ಈ ಸಂಬಂಧ ಸಚಿವ ಸಂಪುಟ ಸಭೆಯಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಕುರಿತಂತೆ ಚರ್ಚೆ ನಡೆಯುತ್ತಿದೆ. ದೇವನಹಳ್ಳಿ ಹಾಗೂ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿಯೂ ಭೂ ಸ್ವಾಧೀನ ವಿರೋಧಿಸಿ ಹೋರಾಟ ನಡೆಯುತ್ತಿದೆ. ಇದಕ್ಕೆ ಬೆಂಬಲವೂ ಇದೆ ಎಂದು ಹೇಳಿದ್ದಾರೆ.ಭೂ ಸ್ವಾಧೀನ ಪಡಿಸಿಕೊಂಡ ಬಳಿಕ ಪರಿಹಾರ, ಪುನರ್ವಸತಿ ಕಲ್ಪಿಸುವ ಸಂಬಂಧ ಹಲವು ಪ್ರಕರಣಗಳಲ್ಲಿ ನಾವು ನೀಡಿದ್ದೇವೆ. ಸಮರ್ಪಕವಾಗಿ ಅನುಷ್ಠಾನವಾಗಿರುವುದು ತುಂಬಾನೇ ಕಡಿಮೆ. ಬಹುರಾಷ್ಟ್ರೀಯ ಕಂಪೆನಿಗಳಿಗೆ ಮಣಿದು ರೈತರ ಜಮೀನು ಕಸಿದುಕೊಳ್ಳುವುದರಿಂದ ಸಮಾಜದಲ್ಲಿ ಅಸಮಾನತೆ ಹುಟ್ಟುತ್ತದೆ.

ಸಂತ್ರಸ್ತರು ಯಾರ ಬಳಿ ಹೋಗಿ ತಮ್ಮ ನೋವು ಹೇಳಿಕೊಳ್ಳಬೇಕು, ನ್ಯಾಯ ಪಡೆದುಕೊಳ್ಳಲು ಅಶಕ್ತರಾಗುತ್ತಾರೆ. ಅಧಿಕಾರಿಗಳು, ಸರ್ಕಾರವು ಸ್ಪಂದಿಸದ ಕೆಟ್ಟ ವ್ಯವಸ್ಥೆ ಇದೆ. ಅನ್ಯಾಯವಾದವರಿಗೆ ನ್ಯಾಯ ಸಿಗುವುದಿಲ್ಲ. ಕಾನೂನು ಹೋರಾಟ ಮಾಡಲು ಹಣ, ಶಕ್ತಿ ಇರುವುದಿಲ್ಲ.ಇಂಥ ಸಂದರ್ಭದಲ್ಲಿ ರೈತರ ಅಳಲು ಸರ್ಕಾರಗಳು ಕೇಳುವುದಿಲ್ಲ. ಭೂ ಸ್ವಾಧೀನಪಡಿಸಿಕೊಳ್ಳುತ್ತಿರುವುದು ದೊಡ್ಡ ತಪ್ಪು ಎಂದು ಕಿಡಿಕಾರಿದ್ದಾರೆ.

ಯೋಜನೆ ಮಾಡುವುದೇ ಆದರೆ ರಾಜ್ಯ ಸರ್ಕಾರವು ರೈತರ ಜೊತೆ ಮಾತುಕತೆ ನಡೆಸಲಿ. ಅವರಿಗೆ ಸಮರ್ಪಕ ಪರಿಹಾರ, ಅನುಕೂಲ ಮಾಡಿಕೊಡಬೇಕು. ರೈತರೇ ಸ್ವಯಂ ಒಪ್ಪಿಗೆಯಿಂದ ನೀಡಿದರೆ ಸರ್ಕಾರ ಭೂಮಿ ಪಡೆದುಕೊಳ್ಳಲಿ. ಇದಕ್ಕೆ ಯಾರ ಅಭ್ಯಂತರವೂ ಇರುವುದಿಲ್ಲ. ಅಲ್ಲಿ ತನಕ ನಿರ್ಧಾರ ಹಿಂಪಡೆಯಬೇಕು ಎಂದು ಜಿ. ಬಿ. ವಿನಯ್ ಕುಮಾರ್ ಒತ್ತಾಯಿಸಿದ್ದಾರೆ.

### ಮಾಜಿ ಸಿಎಂ ಎಸ್ಸೆನ್ ಸ್ಮಾರಕಕ್ಕೆ ಶ್ರೀಶೈಲ ಸ್ವಾಮೀಜಿ ಭೇಟಿ, ಪುಷ್ಪನಮನ



**ಚಿತ್ರದುರ್ಗ:** ನಗರದ ಸೀಬಾರದ ಬಳಿಯಲ್ಲಿನ ಎಸ್ಸೆನ್ ಸ್ಮಾರಕಕ್ಕೆ ಶುಕ್ರವಾರ ಶ್ರೀಶೈಲ ಪೀಠದ ಜಗದ್ಗುರು ಶ್ರೀ ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಭೇಟಿ ನೀಡಿ ಸಮಾಧಿಗೆ ಪುಷ್ಪನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಶ್ರೀಗಳು ಮಾಜಿ ಮುಖ್ಯಮಂತ್ರಿ ನಿಜಲಿಂಗಪ್ಪರವರ ತಮ್ಮ ಅಧಿಕಾರದ ಅವಧಿಯಲ್ಲಿ ಮಾಡಿದ ವಿವಿಧ ಕಾರ್ಯಕ್ರಮಗಳ ಭಾವಚಿತ್ರವನ್ನು ವಿಕ್ಷಣೆ ಮಾಡಿದರು. ಈ ಸಂದರ್ಭದಲ್ಲಿ ಎಸ್ಸೆನ್ ಸ್ಮಾರಕದ ಟ್ರಸ್ಟ್‌ನ ಗೌ.ಕಾರ್ಯದರ್ಶಿ ಹೆಚ್ ಹನುಮಂತಪ್ಪ, ಕೆ.ಇ.ಬಿ.ಷಣ್ಮುಖಪ್ಪ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ. ಕೆ.ತಾಜ್‌ಪೀರ್, ಪಂಚಮಸಾಲಿ ಸಮಾಜದ ಗುತ್ತಿನಾಡ್ ಪ್ರಕಾಶ್, ಹೇಮರೆಡ್ಡಿ ಮಲ್ಲಮ್ಮ ಸಮಾಜದ ಕಾರ್ಯದರ್ಶಿ ಡಿ ಟಿ ಶಿವನಂಜಪ್ಪ, ಶಿವಶಿಂಪಿ ಸಮಾಜದ ಇ.ಎಸ್. ಜಯದೇವಮೂರ್ತಿ, ಸಾಹಿತಿ ನಿರಂಜನ ದೇವರಮನೆ, ಬಸವರಾಜ ಶಾಸ್ತ್ರಿ, ವಿಶ್ವನಾಥ ಶಾಸ್ತ್ರಿ, ಪಂಚಪೀಠಗಳ ಪರಮಭಕ್ತ ಕೆ ಸಿರುದ್ರೇಶ್, ಗೌಳಿ ಸಮಾ ಜದ ಜಾಲೆಕಟ್ಟೆ ರುದ್ರಪ್ಪ, ಲೋಕೇಶ್, ಬೃಹನ್ಮಠದ ಎಂ.ಜೆ.ರುದ್ರ ಮೂರ್ತಿ, ತವಂದಿ ರಾಜ, ಕೆ.ಸಿ. ಗುರು ಬಸವರಾಜು, ಸಿಬಾರದ ಸುತ್ತಮುತ್ತಲಿನ ಭಕ್ತರು ಉಪಸ್ಥಿತರಿದ್ದರು.



ಪರಶುರಾಂಪುರ ಗ್ರಾಪಂ ಉಪಾಧ್ಯಕ್ಷೆಯಾಗಿ ತಿಪ್ಪಮ್ಮ ನಾಗರಾಜಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ರುದ್ರೇಶ್ ಜಗಲೂರುಸ್ವಾಮಿ, ನಾಗಭೂಷಣ, ಪ್ರಕಾಶ್, ಓಬಳೇಶ್, ಕೃಷ್ಣಪ್ಪ, ಅನಿತಾ, ಮಿಲ್ಟಿ ಸಿದ್ದೇಶಿ, ರವಿ, ರಾಮಣ್ಣ, ಗೋವಿಂದಪ್ಪ, ಸರೋಜಮ್ಮ, ಗೌಸಪೀರ್, ಮೋಹನ, ಸೇರಿದಂತೆ ಗ್ರಾಪಂ ಸದಸ್ಯರು ಮತ್ತು ಪಿಡಿಒ ಈಶ್ವರಪ್ಪ ಹಾಗೂ ಬೆಂಬಲಿಗರು ಗ್ರಾಮಸ್ಥರು ಉಪಸ್ಥಿತರಿದ್ದರು.

### ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ

**ದಾವಣಗೆರೆ:** ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ ಪಡೆಯಲು ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸೇವಾಸಿಂಧೂ ಮೂಲಕ https://sevasindhu.karnataka.gov.in ಆಗಸ್ಟ್ 2 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರ 08192-250066 ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,# 44, ಎ ಬ್ಲಾಕ್ , 2ನೇ ಮಹಡಿ, ಜಿಲ್ಲಾ ಆಡಳಿತ ಭವನ , ಕರೂರು ಕ್ರಾಸ್, ಹರಿಹರ ರಸ್ತೆ, ದಾವಣಗೆರೆ- 08192-250022 ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಇಳಿಮುಖ

# ಸಹ ಶಿಕ್ಷಕರ ಮೇಲೆ ಕ್ರಮದ ಆದೇಶಕ್ಕೆ ಪ್ರತಿಭಟನೆ

» **ಚಳ್ಳಕೆರೆ**

ಕಳೆದ ಮೇ ತಿಂಗಳ 4ರಂದು ಪ್ರಕಟಗೊಂಡ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಶೇ.60ರಷ್ಟು ಕಡಿಮೆ ಅಂಕಪಡೆದ ಪ್ರೌಢಶಾಲೆಗಳ ಸಹ ಶಿಕ್ಷಕರ ವಿಷಯವಾರು ಫಲಿತಾಂಶವನ್ನು ಪರಿಗಣಿಸಿ ವಾರ್ಷಿಕ ಬಡ್ತಿ ತಡೆಯುವುದಲ್ಲದೆ, ಅನುದಾನ ಪಡೆಯುತ್ತಿರುವ ಶಿಕ್ಷಕರ ಮೂರು ವರ್ಷಗಳಲ್ಲಿ ಶೇ.60ರಷ್ಟು ಕಡಿಮೆ ಫಲಿತಾಂಶ ನೀಡಿದಲ್ಲಿ ಅಂತಹ ವಿಷಯ ಶೀಕ್ಷಕರ ವೇತನಾನುದಾನವನ್ನು ಕಡಿತಗೊಳಿಸುವ ಶಿಕ್ಷಣ ಇಲಾಖೆಯ ಆದೇಶವನ್ನು ಹಿಂಪಡೆಯುವಂತೆ ಒತ್ತಾಯಿಸಿ ತಾಲ್ಲೂಕು ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಪ್ರತಿಭಟನೆ ನಡೆಸಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕ್ರಮದ ಆದೇಶವನ್ನು ಹಿಂದಪಡೆಯುವಂತೆ ಮನವಿ ಅರ್ಪಿಸಿದರು.

ಸಂಘದ ಅಧ್ಯಕ್ಷ ಬಿ.ರಾಜ್‌ಕುಮಾರ್ ಮಾತನಾಡಿ, ಎಸ್‌ಎಸ್‌ಎಲ್‌ಸಿ ಫಲಿತಾಂಶ ಕಡಿಮೆಯಾಗುವುದಕ್ಕೆ ಹಲವಾರು ಕಾರಣಗಳಿವೆ, ವಿಶೇಷವಾಗಿ ವಿದ್ಯಾರ್ಥಿಯ ಕಲಿಕಾಸಕ್ತಿಯನ್ನು ಫಲಿತಾಂಶ ಅವಲಂಬಿಸಿದೆ. ಪ್ರೌಢಶಾಲಾ ಸಹ ಶಿಕ್ಷಕರು ಹಗಲುರಾತ್ರಿ ಎನ್ನದೆ ವಿದ್ಯಾರ್ಥಿಗಳ ಭವಿಷ್ಯವನ್ನು ಉಜ್ವಲಗೊಳಿಸುವ ನಿಟ್ಟಿನಲ್ಲಿ ವಿಶೇಷ ತರಗತಿ, ಉಚಿತಕೋಚಿಂಗ್, ಮಾರ್ಗದರ್ಶನ ಶಿಬಿರ ಹಾಗೂ ವಿಷಯಾಧಾರಿತ ನುರಿತ ಶಿಕ್ಷಕರಿಂದ ಸಾಕಷ್ಟು ಮಾಹಿತಿ ನೀಡಿದರೂ ಸಹ



ಫಲಿತಾಂಶನಿರೀಕ್ಷಿತಮಟ್ಟದಲ್ಲಿಲಭ್ಯವಾಗಿಲ್ಲ, ಇದಕ್ಕೆ ಪ್ರೌಢಶಾಲಾ ಸಹ ಶಿಕ್ಷಕರನ್ನು ಗುರಿಯಾಗಿಸುವುದು ಸರಿಯಲ್ಲವೆಂದರು.

ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಟಿ.ವೀರೇಶ್ ಮಾತನಾಡಿ, ಶಿಕ್ಷಕರ ವೇತನ, ಬಡ್ತಿ ತಡೆಹಿಡಿಯುವುದೂ ಸೇರಿದಂತೆ ಅನೇಕ ರೀತಿಯ ಶಿಕ್ಷೆಯಪ್ರಮಾಣವನ್ನು ಕಾರ್ಯಾದೇಶದಲ್ಲಿ ವಿವರಿಸಲಾಗಿದೆ. ಆದರೆ, ವಿದ್ಯಾರ್ಥಿಗಳ ಫಲಿತಾಂಶಕ್ಕೂ ಶಿಕ್ಷಕರ ಕಾರ್ಯಕ್ಕೂ ತುಲನೆಮಾಡುವುದು ಸರಿಯಲ್ಲ. ಕಳೆದ ಸುಮಾರು 20 ವರ್ಷಗಳ ಹಿಂದೆ ಶೇ.20ರಿಂದ30ರಷ್ಟು ಫಲಿತಾಂಶ ಬಂದರೂ ಸಹ ಶಿಕ್ಷಕರಿಗೆ ಯಾವುದೇ ತೊಂದರೆಯನ್ನು ಸರ್ಕಾರ ಉಂಟು ಮಾಡಿರಲಿಲ್ಲ. ಆದರೆ, ಈಗ ಗುಬ್ಬಿಯ ಮೇಲೆ ಬ್ರಹ್ಮಾಸ್ತ್ರವೆನ್ನುವಂತೆ ಪ್ರೌಢಶಾಲಾ ಸಹಶಿಕ್ಷಕರನ್ನುಗುರಿಯಾಗಿಸುವ ಸರ್ಕಾರದ ನಿರ್ಧಾರ ಖಂಡನೀಯ. ತಾಲ್ಲೂಕು ಸರ್ಕಾರಿ ನೌಕರರ ಸಂಘ ಪ್ರೌಢಶಾಲಾ ಶಿಕ್ಷಕರಿಗೆ ಸಂಪೂರ್ಣ ಬೆಂಬಲ ನೀಡಲಿದೆ ಎಂದರು.

ತಾಲ್ಲೂಕು ಪ್ರೌಢಶಾಲಾ ಮುಖ್ಯೋಪಾಧ್ಯಾಯ ಸಂಘದ ಗೌರವಾಧ್ಯಕ್ಷಕೆ.ಪಿ.ತಿಪ್ಪೇಸ್ವಾಮಿ ಮಾತನಾಡಿ, ವಿದ್ಯಾರ್ಥಿಪ್ರೌಢಶಾಲೆಗೆ ದಾಖಲಾಗುವ ಮುನ್ನ ಪ್ರಾಥಮಿಕ, ಮಾಧ್ಯಮಿಕ ಶಿಕ್ಷಣವನ್ನು ಪೂರೈಸಿಕೊಂಡು ಬಂದಿರುತ್ತಾನೆ. ಈ ಹಂತದಲ್ಲಿ ವಿದ್ಯಾರ್ಥಿಗಳಿಗೆ ಸಿಗಬೇಕಾದ ನೈಜ್ಯ ಶಿಕ್ಷಣ ದೊರಕಿರುವುದಿಲ್ಲ. ಬಹುತೇಕ ವಿದ್ಯಾರ್ಥಿಗಳು ನಿರಾಸಕ್ತಿಯಿಂದ ಅಭ್ಯಾಸ ಮಾಡಿ ಪ್ರೌಢಶಾಲೆಗೆ ಬರುತ್ತಾರೆ. ಶಿಕ್ಷಕರು ಎಷ್ಟೇ ಶ್ರಮಪಟ್ಟರು ವಿದ್ಯಾರ್ಥಿಗಳು ತಮ್ಮ ಕಲಿಕೆಯನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಹೆಚ್ಚು ಚಿಂತನೆ ನಡೆಸುವುದಿಲ್ಲ. ಆದರೆ, ಸರ್ಕಾರ ಪ್ರೌಢಶಾಲಾ ಸಹಶಿಕ್ಷಕರ ಮೇಲೆ ಕ್ರಮಕೈಗೊಳ್ಳುವುದು ಸಾಧುವಲ್ಲ, ಸರ್ಕಾರ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಸಂಪೂರ್ಣ ಕಾರ್ಯವೈಖರಿಯನ್ನು ಅವಲೋಕಿಸಿದರೆ ಮಾತ್ರ ಶಿಕ್ಷಕ ಕಾರ್ಯಒತ್ತಡ ಬಗ್ಗೆ ತಿಳಿಯುತ್ತದೆ. ಇಂತಹ ಆದೇಶ ಶಿಕ್ಷಕರ ಆತ್ಮಸ್ಥೈರ್ಯವನ್ನು ಕುಗ್ಗಿಸುತ್ತದೆ ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ತಾಲ್ಲೂಕಿನಾದ್ಯಂತ ಒಟ್ಟು 400ಕ್ಕೂ ಹೆಚ್ಚು ಪ್ರೌಢಶಾಲಾ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಎಲ್ಲಾ ಹಂತದಲ್ಲೂ ಇವರ ಕಾರ್ಯವನ್ನು ಅವಲೋಕಿಸಿದಾಗ ಇವರಿಂದ ಯಾವುದೇ ಲೋಪವಾಗಿಲ್ಲವೆಂಬುವುದು ಅರ್ಥೈಸಿಕೊಳ್ಳಬಹುದು. ವಿಶೇಷವಾಗಿ ಪರೀಕ್ಷಾ ಸಂದರ್ಭದಲ್ಲಿ ಬೆಳಗ್ಗಿನಿಂದ ಸಂಜೆವರೆಗೂ ಎಲ್ಲಾ ಶಿಕ್ಷಕರು ವಿದ್ಯಾರ್ಥಿಗಳೊಂದಿಗೆ ಇದ್ದು, ಅವರಿಗೆ ಸೂಕ್ತ ಮಾರ್ಗದರ್ಶನ ನೀಡಿದ್ದಾರೆ. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ನಿಮ್ಮೆಲ್ಲರ ಪರವಾಗಿ ಉಪನಿರ್ದೇಶಕರಿಗೆ ನಿಮ್ಮ ಮನವಿಯನ್ನು ಕಳಿಸಿಕೊಡುವ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಉಪಾಧ್ಯಕ್ಷ ಗೋವಿಂದರೆಡ್ಡಿ, ಕಾರ್ಯದರ್ಶಿ ಡಿ.ವೀರಣ್ಣ, ಖಜಾಂಚಿ ಎನ್.ಬಸವರಾಜು, ರಾಜ್ಯಪರಿಷತ್ ಸದಸ್ಯ ಡಿ.ನಾಗರಾಜು, ಜಿಲ್ಲಾ ಖಜಾಂಚಿ ರುದ್ರಮುನಿ, ಜಿ.ಟಿ.ವೀರಭದ್ರಸ್ವಾಮಿ, ಸಂಘಟನಾ ಕಾರ್ಯದರ್ಶಿ ಚಂದ್ರಶೇಖರ್, ಸಹಕಾರ್ಯದರ್ಶಿ ಯಶೋಧ, ಉಪಾಧ್ಯಕ್ಷರಾದ ಶ್ರೀನಿವಾಸ್, ಪಾವನ, ಬಿ.ವೈ.ತಿಪ್ಪೇಸ್ವಾಮಿ, ಬಿ.ಎಂ.ವೆಂಕಟೇಶ್, ಪ್ರದೀಪ್,ವಿಜಯಕುಮಾರ್,ಮನೋಹರ, ಬಿ.ಎಲ್.ಉಮಾ, ಪೂರ್ಣಿಮಾ, ಕುಸುಮ, ರೆಹನಾ, ದಾದಾಪೀರ್, ಗೀತ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಲಾವಿದರ ಸಹಾಯಾರ್ಥ ನಾಟಕ ಪ್ರದರ್ಶನ



» **ಚಳ್ಳಕೆರೆ**

ಚಳ್ಳಕೆರೆ ತಾಲ್ಲೂಕು ಕಳೆದ ಹಲವಾರು ವರ್ಷಗಳಿಂದ ರಂಗಕಲೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸಾಮಾಜಿಕ ಪೌರಾಣಿಕ ನಾಟಕಗಳ ಮೂಲಕ ಈ ಭಾಗದ ಜನರಿಗೆ ಮನರಂಜನೆಯ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ತಿಳಿಸುವಲ್ಲಿ ಯಶಸ್ವಿಯಾಗಿದೆ. ವಿಶೇಷವಾಗಿ ಉತ್ತರ ಕರ್ನಾಟಕದ ನಾಟಕಗಳು ಹೆಚ್ಚು ಜನಪ್ರಿಯವಾಗಿವೆ ಎಂದು ನೃತ್ಯನಿಕೇತನ ಸಂಚಾಲಕ ಯು.ಎಸ್.ವಿಷ್ಣುಮೂರ್ತಿರಾವ್ ತಿಳಿಸಿದರು.

ಅವರು, ಶುಕ್ರವಾರ ಪ್ರವಾಸಿಮಂದಿರದಲ್ಲಿ ಉತ್ತರಕರ್ನಾಟಕ ಇಳಕಲ್‌ನ ರಂಗಸಂಗಮ ಕಲೆ ಮತ್ತು ಸಾಂಸ್ಕೃತಿಕ ಸಂಘ ಪ್ರದರ್ಶಿಸಲಿರುವ ಮಾಯಮದಮರ್ಧನ ಅಲ್ಲಮಪ್ರಭು ಐತಿಹಾಸಿಕ ನಾಟಕದ ಬಿತ್ತಿಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿದರು. ಜುಲೈ 13ರ ಸಂಜೆ 6.30ಕ್ಕೆ ವೀರಶೈವ ಕಲ್ಯಾಣಮಂಟಪದಲ್ಲಿ ನಾಟಕ ಪ್ರದರ್ಶವಿದ್ದು, ಕಲಾಸಕ್ತರು ಟಿಕೇಟ್ ಖರೀದಿಸಿ ನಾಟಕ ವೀಕ್ಷಿಸುವಂತೆ ಮನವಿ ಮಾಡಿದರು. ಅಖಿಲ ಭಾರತ ವೀರಶೈವ ಮಹಾಸಭಾ ಮಹಿಳಾ ಉಪಾಧ್ಯಕ್ಷೆ ಭಾಗ್ಯಮ್ಮ ನಾಟಕದ ಬಿತ್ತಿ ಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿ, ನಾಟಕ ಕಲೆ ಸಾಹಿತ್ಯಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಿ ಕಲಾವಿದರನ್ನು ಬೆಳೆಸಬೇಕಿದೆ. ಅಳಿವಿನಂಚಿನಲ್ಲಿರುವ ನಾಟಕ ಕಲೆಯನ್ನು ಉಳಿಸಿ ಬೆಳೆಸಬೇಕಿದೆ ಎಂದರು. ರಂಗಸಂಗಮ ಕಲೆ ಮತ್ತು ಸಾಂಸ್ಕೃತಿಕ ಸಂಘ ಅಧ್ಯಕ್ಷೆ ರೇಷ್ಮಾ ಸಿ.ಅಳವಂಡಿ ಮಾತನಾಡಿ, ಉತ್ತರ ಕರ್ನಾಟಕ ಕಲೆಯ ತವರಾಗಿದ್ದು, ದೇಶ ವಿದೇಶಗಳಲ್ಲಿತನ್ನದೇಯಾದಕಲೆಯಪಂಡಿತ್ಯದಿಂದ ಖ್ಯಾತಿಯಾಗಿದೆ. ಈ ನಾಟಕ ಕಳೆದ ಹಲವಾರು ವರ್ಷಗಳಿಂದ ಪ್ರದರ್ಶನಕಂಡು ಜನರಿಂದ ಮೆಚ್ಚುಗೆ ಪಡೆದಿದೆ. ಪ್ರಧಾನ ಭೂಮಿಕೆಯಲ್ಲಿ ರೇಷ್ಮಾ ಸಿ.ಅಳವಂಡಿ ಕಾಣಿಸಿಕೊಳ್ಳಲಿದ್ದು, ನಿರ್ದೇಶನ ಮಹಾಂತೇಶ್‌ಗಜೇಂದ್ರಗಡ, ದಿವಂಗತ ಪಕೀರಪ್ಪ ವರವಿವಿರಚಿತ ಕೃತಿಯಾಗಿದ್ದು ಇಲ್ಲಿನ ಕಲಾಭಿಮಾನಿಗಳು ಪ್ರೋತ್ಸಾಹಿಸುವಂತೆ ಮನವಿ ಮಾಡಿದರು. ಸಂಜೀವಿನಿ ಕ್ಲಿನಿಕ್‌ನ ಎಂ.ಎನ್.ಮೃತ್ಯುಂಜಯ, ಸುರಕ್ಷಾ ಪಾಲಿಕ್ಲಿನಿಕ್‌ನ ಬಿ.ಫರೀದ್‌ಖಾನ್, ಅಖಿಲಭಾರತ ವೀರಶೈವ ಮಹಾಸಭಾದ ಉಪಾಧ್ಯಕ್ಷೆ ಬಿ.ಎಂ.ಭಾಗ್ಯಮ್ಮ, ಕಲಾವಿದೆ ಮಹದೇವಿದಾವಣಗೆರೆ ಮುಂತಾದವರು ಉಪಸ್ಥಿತರಿದ್ದರು.

### ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳಿಗೆ ಉಚಿತ ಡಿ.ಎಡ್ ತರಬೇತಿ

» **ದಾವಣಗೆರೆ**

ರಾಜ್ಯ ಸರ್ಕಾರದಿಂದ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ, ಮೈಸೂರು ಇಲ್ಲಿ ಉಚಿತವಾಗಿ ಅಂಧ ಮಕ್ಕಳಿಗೆ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷಗಳ ವಿಶೇಷ ಡಿ.ಎಡ್ ತರಬೇತಿಗೆ ಅರ್ಜಿ ಅಹ್ವಾನಿಸಲಾಗಿದೆ. ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.50 ರಷ್ಟು (ಎಸ್.ಸಿ, ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.45%) ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಜುಲೈ 12 ರೊಳಗಾಗಿ ವೆಬ್‌ಸೈಟ್ https://nber-rehabcouncil.gov.in/ ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು(ತರಬೇತಿ) ಕಚೇರಿ, ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರ, ಪುಲಿಕೇಶಿ ರಸ್ತೆ, ತಿಲಕ್‌ನಗರ, ಮೈಸೂರು-570001, ದೂರವಾಣಿ ಸಂ:0821-2491600, ತರಬೇತಿ ಸಂಯೋಜಕರು: ಆಶಾ.ವಿ.ಹಿರೇಮಠ್-9113561620, ಟಿ.ಡಿ. ಮಂಜುನಾಥ  9686762378 ಸಂಪರ್ಕಿಸಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ ಪ್ರಕಾಶ್ ತಿಳಿಸಿದ್ದಾರೆ.

### ಪ್ರಧಾನಮಂತ್ರಿ ಅವಾಸ್ 2.0 ಯೋಜನೆಯಡಿ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ ನಗರ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಅವಾಸ್ 2.0 ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಒಂಟಿ ಮಹಿಳೆಯರು, ಅಂಗವಿಕಲರು , ಹಿರಿಯ ನಾಗರಿಕರು, ತೃತೀಯ ಲಿಂಗಿಗಳು, ಎಸ್‌ಸಿ, ಎಸ್‌ಟಿ, ಹಿಂದುಳಿದ, ಅಲ್ಪಸಂಖ್ಯಾತ ವರ್ಗದವರು, ಸ್ವಚ್ಛತಾ ಕಾರ್ಮಿಕರು, ಪಿಎಂ ಎಸ್‌ಎ ವಿನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಕೈಗಾರಿಕರು, ವಲಸೆ ಬಂದ ಕುಟುಂಬದವರು ತಮ್ಮ ಅರ್ಜಿಗಳನ್ನು URL:http://pmayurban.gov.in ಜುಲೈ 15 ರೊಳಗಾಗಿ ಸಲ್ಲಿಸಬಹುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

---

**ಸುಧಾರಿತ ಈರುಳ್ಳಿ ಬೆಳೆಯ ಉತ್ಪಾದನಾ ತಾಂತ್ರಿಕತೆ ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ಆರ್.ರಜನೀಕಾಂತ**

# ಸೂಕ್ತ ತಳಿ, ಪೋಷಕಾಂಶಗಳ ನಿರ್ವಹಣೆಯಿಂದ ಹೆಚ್ಚಿನ ಇಳುವರಿ, ಗುಣಮಟ್ಟ ಈರುಳ್ಳಿ ಉತ್ಪಾದನೆ

» **ಚಿತ್ರದುರ್ಗ**

ಹೆಚ್ಚಿನ ಇಳುವರಿ ಹಾಗೂ ಗುಣಮಟ್ಟದ ಈರುಳ್ಳಿ ಉತ್ಪಾದನೆ ಪಡೆಯಲು ರೈತರು ಸೂಕ್ತ ತಳಿಯ ಆಯ್ಕೆ, ಮಣ್ಣು ಮಾದರಿ ಆಧಾರಿತ ಪೋಷಕಾಂಶಗಳ ನಿರ್ವಹಣೆ ಹಾಗೂ ಹೆಚ್ಚಿನ ಸಾವಯವ ಗೊಬ್ಬರ ಬಳಸುವುದು ಸೂಕ್ತ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ಆರ್. ರಜನೀಕಾಂತ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಗುರುವಾರ ಜಿಲ್ಲೆಯ ರೈತರಿಗೆ "ಸುಧಾರಿತ ಈರುಳ್ಳಿ ಬೆಳೆಯ ಉತ್ಪಾದನಾ ತಾಂತ್ರಿಕತೆಗಳ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಚಿತ್ರದುರ್ಗ ಜಿಲ್ಲೆಯಲ್ಲಿ ಈರುಳ್ಳಿ ಬೆಳೆಯು ಮುಂಗಾರು ಹಂಗಾಮಿನಲ್ಲಿ ಬೆಳೆಯುವ ಪ್ರಮುಖ ತರಕಾರಿ ಬೆಳೆಯಾಗಿದ್ದು, ಮುಖ್ಯವಾಗಿ ಚಿತ್ರದುರ್ಗ, ಹಿರಿಯೂರು ಮತ್ತು ಚಳ್ಳಕೆರೆ ತಾಲ್ಲೂಕಿನಲ್ಲಿ ಹೆಚ್ಚಾಗಿ ಬೆಳೆಯುತ್ತಿದ್ದು ಸದರಿ ಬೆಳೆಯಲ್ಲಿ ಹೆಚ್ಚಿನ ಇಳುವರಿ ಪಡೆಯಲು ಅನುಸರಿಸಬೇಕಾದ ಬೇಸಾಯ ಕ್ರಮಗಳು ಹಾಗೂ ಕೀಟ ಮತ್ತು ರೋಗ ನಿರ್ವಹಣೆ ಕುರಿತ ತಾಂತ್ರಿಕ ಮಾಹಿತಿಯ ಸದುಪಯೋಗ ಪಡೆದುಕೊಳ್ಳಲು ಮನವಿ ಮಾಡಿದರು.

ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯದ ತರಕಾರಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಪ್ರಕಾಶ್ ಕೆರೂರೆ ಮಾತನಾಡಿ, ಈರುಳ್ಳಿ ಬೆಳೆಗೆ ಜೂನ್ ಮತ್ತು ಜುಲೈ ತಿಂಗಳು ಬಿತ್ತನೆಗೆ ಸೂಕ್ತವಾಗಿದ್ದು, ಈರುಳ್ಳಿ ಬೆಳೆಯ ವಿವಿಧ ತಳಿಗಳು, ರಸಗೊಬ್ಬರದ ಪ್ರಮಾಣ, ಬಿತ್ತನೆ ಬೀಜ ಬಳಸುವ ಪ್ರಮಾಣ, ಬೀಜೋಪಚಾರದ ಪ್ರಾಮುಖ್ಯತೆ, ಬೆಳೆಯಲ್ಲಿ ಸಸಿ ಮಡಿ ಮಾಡುವ ವಿಧಾನ, ಕಳೆ ನಿರ್ವಹಣೆ ಮತ್ತು ನೀರು ನಿರ್ವಹಣೆ ಕುರಿತು ಮಹಿತಿ ನೀಡಿದರು.

ತದನಂತರ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ತಾಕಿಗೆ ಭೇಟಿ ನೀಡಿ ಈರುಳ್ಳಿ ಬೆಳೆಯ ವಿವಿಧ ತಳಿಗಳ ಪ್ರಯೋಗದ ಪ್ರಾತ್ಯಕ್ಷಿಕೆ ತಾಕಿಗೆ ಮತ್ತು ಸಂಶೋಧನಾ ಕೇಂದ್ರದ ಮುಖ್ಯಸ್ಥ ಡಾ. ಶರಣಪ್ಪ ಜಂಗಂಡಿಯವರು ಹೊಸದಾಗಿ ತಯಾರಿಸಿದ ಈರುಳ್ಳಿಯ ಮೇಲಿನ ಜುಟ್ಟು ಕತ್ತರಿಸುವ ಯಂತ್ರದ ಕುರಿತು ಮಾಹಿತಿ ನೀಡಿದರು.

ಬಬ್ಬೂರು ಕೃಷಿ ವಿಜ್ಞಾನ ಕೇಂದ್ರದ ಕೀಟಶಾಸ್ತ್ರಜ್ಞ ಡಾ.ಟಿ.ರುದ್ರಮುನಿ ಅವರು, ಈರುಳ್ಳಿ ಬೆಳೆಯಲ್ಲಿ ಬರುವ ಪ್ರಮುಖ ಕೀಟಗಳಾದ ಥ್ರೀಪ್ಸ್, ನುಸಿ, ತಂಬಾಕಿನ ಹುಳು ಹಾಗೂ ಪ್ರಮುಖ ರೋಗಗಳಾದ ನೇರಳೆ ಮಚ್ಚೆ ರೋಗ, ದುಂಡಾಣು ಗೆಡ್ಡೆಕೊಳೆ ರೋಗಗಳಸಮಗ್ರ ನಿರ್ವಹಣೆ ಕ್ರಮಗಳು ಕುರಿತು ಮಾಹಿತಿ ನೀಡಿದರು.

---

**ನಗರಸಭೆ ಅಧ್ಯಕ್ಷರಾಗಿ ಶಿಲ್ಪಿಮುರುಳಿ ಅಧಿಕಾರಸ್ವೀಕಾರ**

## ಸಾರ್ವಜನಿಕ ಸಮಸ್ಯೆಗಳಿಗೆ ಕ್ರಿಯಾಶೀಲವಾಗಿ ಸ್ಪಂದಿಸಿ: ಶಾಸಕ ಟಿ.ರಘುಮೂರ್ತಿ ಸಲಹೆ

» **ಚಳ್ಳಕೆರೆ**

ನಗರಸಭೆಯ ನೂತನ ಅಧ್ಯಕ್ಷೆ ಶಿಲ್ಪಮುರುಳಿ ಶುಕ್ರವಾರ ಕಚೇರಿಯಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳೊಂದಿಗೆ ಅಧ್ಯಕ್ಷರಾಗಿ ಅಧಿಕಾರವಹಿಸಿಕೊಂಡರು. ಅಧ್ಯಕ್ಷರ ಅಧಿಕಾರ ಸ್ವೀಕಾರ ಸಮಾರಂಭಕ್ಕೆ ಕಚೇರಿಯನ್ನು ನೂತನವಾಗಿ ಸಜ್ಜುಗೊಳಿಸಲಾಗಿತ್ತು.

ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಆಗಮಿಸಿ ಅಧ್ಯಕ್ಷರಿಗೆ ಶುಭಹಾರೈಸಿದರು. ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಳೆದ ಜೂನ್ 30ರಂದು ನಗರಸಭೆಯ ನೂತನ ಅಧ್ಯಕ್ಷರಾಗಿ ಶಿಲ್ಪಿಮುರುಳೀಧರ ಆಯ್ಕೆಯಾಗಿದ್ದು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಮಾಹಿತಿ ಬಂದಿದೆ. ಸಾರ್ವಜನಿಕರೂ ಸಹ ಉತ್ತಮ ಕೆಲಸಕಾರ್ಯಗಳನ್ನು ನಿರೀಕ್ಷೆ ಮಾಡುತ್ತಿದ್ದಾರೆ. ನೂತನ ಅಧ್ಯಕ್ಷರು ಪ್ರತಿನಿತ್ಯವೂ ಸಾರ್ವಜನಿಕರ ಸಮಸ್ಯೆಯ ಬಗ್ಗೆ ಚಿಂತೆನೆ ನಡೆಸಬೇಕು. ಅಧಿಕಾರಿ ಹಾಗೂ ಸಿಬ್ಬಂದಿ ವರ್ಗಕ್ಕೆ ಸೂಕ್ತ ನಿರ್ದೇಶಕ ನೀಡಬೇಕು, ಜನಸಾಮಾನ್ಯರಿಗೆ ಉತ್ತಮ ಸೇವೆ ನೀಡವ ಅಭಿಲಾಷೆ ಹೊಂದಬೇಕೆಂದರು.



ನೂತನ ಅಧ್ಯಕ್ಷೆ ಶಿಲ್ಪಿಮುರುಳಿ ಮಾತನಾಡಿ, ನಗರಸಭೆಯ ಆಡಳಿತಕ್ಕೆ ಹೊಸಆಯಾಮ ನೀಡುವ ಇಚ್ಚೆಗೊಂದಿದ್ದೇನೆ. ಈಗಾಗಲೇ ಶಾಸಕರು ಎಲ್ಲಾ ಸಹಕಾರಕ್ಕೆ ಭರವಸೆ ನೀಡಿದ್ದಾರೆ. ನಗರಸಭೆಯ ಎಲ್ಲಾ ಸದಸ್ಯರು ಪಕ್ಷಬೇದ ಮರೆತು ನನಗೆ ಬೆಂಬಲ ನೀಡಿದ್ದಾರೆ. ಈಗಾಗಲೇ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗಕ್ಕೂ ನಿರ್ದೇಶನ ನೀಡಿದ್ದು, ಪ್ರತಿನಿತ್ಯವೂ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುವ ಭರವಸೆ ನೀಡಿದರು.

ಉಪಾಧ್ಯಕ್ಷೆ ಕವಿತಾಬೋರಯ್ಯ, ಸದಸ್ಯರಾದ ಮಂಜುಳಾ, ಕೆ.ವೀರಭದ್ರಪ್ಪ, ರಾಘವೇಂದ್ರ, ರಮೇಶ್‌ಗೌಡ, ಚಳ್ಳಕೆರೆಯಪ್ಪ, ವಿರೂಪಾಕ್ಷ, ಮಲ್ಲಿಕಾರ್ಜುನ್, ಹೊಯ್ಸಳಗೋವಿಂದ, ನಾಮಿನಿ ಸದಸ್ಯರಾದ ನಟರಾಜ್, ನೇತಾಜಿಪ್ರಸನ್ನ, ಬಡಗಿಪಾಪಣ್ಣ, ಆರ್.ವೀರಭದ್ರಪ್ಪ, ಅನ್ವರ್‌ಮಾಸ್ಟರ್, ಜಿ.ಟಿ.ಶಶಿಧರ, ಕರೀಕೆರೆರಾಜಣ್ಣ ಮುಂತಾದವರು ಉಪಸ್ಥಿತರಿದ್ದರು.

---



**ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವತಿಯಿಂದ ಬನ್ನೇರುಘಟ್ಟ ಪ್ರಕೃತಿ ಶಿಬಿರದಲ್ಲಿ ಎರಡು ದಿನಗಳ ಕಾಲ ನಡೆದ ಪ್ರಧಾನ ಮಂತ್ರಿಗಳ 15 ಹೊಸ ಅಂಶಗಳ ಕಾರ್ಯಕ್ರಮದ ಜಿಲ್ಲಾ ಮಟ್ಟದ ಸಮಿತಿ ಸದಸ್ಯರ ತರಬೇತಿಯಲ್ಲಿ ಭಾಗವಹಿಸಿದ್ದ ಚಿತ್ರದುರ್ಗದ ಸೈಯದ್ ಅಫಾಖ್ ಅಹಮದ್‌ಗೆ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಪ್ರಮಾಣ ಪತ್ರ ವಿತರಿಸಿದರು. ಕಾರ್ಯದರ್ಶಿ ಡಾ.ಮಾಜುದ್ದಿನ್‌ಖಾನ್ ಈ ಸಂದರ್ಭದಲ್ಲಿದ್ದರು.**

---

## ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಆಯ್ಕೆ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ಇದರ ನೂತನ ಅಧ್ಯಕ್ಷ ಉಪಾಧ್ಯಕ್ಷರ ಹುದ್ದೆಗೆ ಶುಕ್ರವಾರ ಆಯ್ಕೆ ಪ್ರಕ್ರಿಯೆ ನಡೆದಿದ್ದು, ಇದರಲ್ಲಿ ಅಧ್ಯಕ್ಷರಾಗಿ ಎ,ಈಶ್ವರಪ್ಪ ಉಪಾಧ್ಯಕ್ಷರಾಗಿ ಎಸ್.ಜಯ್ಯಪ್ಪ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಗಳಾದ ಸಜೀವರಾಂ ತಿಳಿಸಿದ್ದಾರೆ. ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತಕ್ಕೆ ಕಳೆದ 22 ರಂದು ಚುನಾವಣೆ ನಡೆದಿದ್ದು 12 ಸ್ಥಾನಗಳಲ್ಲಿ ಮೂರು ಸ್ಥಾನಗಳು ಅವಿರೋಧವಾಗಿ ಆಯ್ಕೆಯಾಗಿದ್ದು ಉಳಿದ 9 ಸ್ಥಾನಗಳಿಗೆ ಚುನಾವಣೆ ನಡೆದಿದ್ದು, 9 ಸ್ಥಾನಗಳಿಗೆ 19 ಜನ ಸ್ಪರ್ಧಾ ಕಣದಲ್ಲಿದ್ದರು ಅಂತಿಮವಾಗಿ ಮತದಾರರು ಎ.ಈಶ್ವರಪ್ಪ ಮತ್ತು ನಿಶಾನಿ ಜಯ್ಯಣ್ಣ ರವರು ಗಂಪಿನ ಸದಸ್ಯರನ್ನು ಆಯ್ಕೆ ಮಾಡಿದರು. ಇಂದು ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ಕಚೇರಿಯಲ್ಲಿ ನಡೆದ ನಿರ್ದೇಶಕರ ಸಭೆಯಲ್ಲಿ ಅಧ್ಯಕ್ಷ-ಉಪಾಧಕ್ಷ ಸ್ಥಾನಕ್ಕೆ ಅವಿರೋದ ಆಯ್ಕೆ ನಡೆದಿದ್ದು ಅಧ್ಯಕ್ಷರಾದ ಎ,ಈಶ್ವರಪ್ಪ ಉಪಾಧ್ಯಕ್ಷರಾಗಿ ಎಸ್. ಜಯ್ಯಪ್ಪ ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ನಿರ್ದೇಶಕರುಗಳಾದ ನಿಶಾನಿ ಜಯ್ಯಣ್ಣ, ಎಸ್.ತಿಮ್ಮಪ್ಪ, ಸೂರ್ಯ ಪ್ರಕಾಶ್, ಮಲ್ಲಿಕಾರ್ಜುನ್, ಲಕ್ಷ್ಮೀದೇವಿ, ಪಾಪೇಶ್, ಶೇಖಮ್ಮ, ಮೂರ್ತಿ, ನರಸಿಂಗನ್ ಡಿ, ಏಕಾಂತಪ್ಪ ಭಾಗವಹಿಸಿದ್ದರು. ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ಮುಖ್ಯ ಕಾರ್ಯ ನಿರ್ವಹಕ ಅಧಿಕಾರಿ ರಾಮಕೃಷ್ಣಪ್ಪ ಭಾಗವಹಿಸಿದ್ದರು. ಚಿತ್ರದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ನೂತನ ಅಧ್ಯಕ್ಷರಾದ ಎ,ಈಶ್ವರಪ್ಪ ಉಪಾಧ್ಯಕ್ಷರಾಗಿ ಎಸ್.ಜಯ್ಯಪ್ಪ ಆಯ್ಕೆಯಾಗಿದ್ದಕ್ಕೆ ಅಭಿಮಾನಿಗಳು ಪಟಾಕಿಯನ್ನು ಸಿಡಿಸಿ ಸಿಹಿಯನ್ನು ಹಂಚುವುದರ ಮೂಲಕ ತಮ್ಮ ನಾಯಕ ಗೆಲುವು ಸಾಧಿಸಿದ್ದಕ್ಕೆ ಸಂತಸವನ್ನು ಹಂಚಿಕೊಂಡರು.

## ಜೋಗ, ಶಿರಸಿಗೆ ವಿಶೇಷ ಪ್ಯಾಕೇಜ್

**ದಾವಣಗೆರೆ** : ದಾವಣಗೆರೆ ಹಾಗೂ ಹರಿಹರದಿಂದ ಜೋಗ ಮತ್ತು ಶಿರಸಿಗೆ ವಿಶೇಷ ಪ್ಯಾಕೇಜ್ ಸಾರಿಗೆ ವ್ಯವಸ್ಥೆಯನ್ನು ಜುಲೈ 13 ರಿಂದ ಪ್ರತಿ ಶನಿವಾರ, ಭಾನುವಾರ, ರಜಾದಿನಗಳಂದು ಮಾಡಲಾಗಿದೆ. ದಾವಣಗೆರೆ-ಶಿರಸಿ ಬೆಳಿಗ್ಗೆ 7 ಗಂಟೆಗೆ, ಶಿರಸಿ-ಜೋಗ ಮಧ್ಯಾಹ್ನ 12 ಗಂಟೆಗೆ, ಜೋಗ-ದಾವಣಗೆರೆ ಸಂಜೆ 4.30ಕ್ಕೆ ಇರುತ್ತದೆ. ಪ್ರಯಾಣದ ದರ 2 ಬದಿ ಸೇರಿ ಒಬ್ಬರಿಗೆ ರೂ.650, ಮಕ್ಕಳ ಪ್ರಯಾಣ ದರ ರೂ.500ನ್ನು ನಿಗಧಿಗೊಳಿಸಲಾಗಿದೆ. ಮುಂಗಡ ಬುಕ್ಕಿಂಗ್ ಕೌಂಟರ್ ಹಾಗೂ ಆನ್‌ಲೈನ್ ಬುಕ್ಕಿಂಗ್ ksrtc.karnataka.gov.in ಮಾಡಬಹುದು.

---

**ಪ್ರಮುಖ ಸುದ್ದಿ**

# ಕುಟುಂಬ ಕಲ್ಯಾಣ ಕಾರ್ಯಕ್ರಮ ಐಇಸಿ ಕಾರ್ನರ್ ಪ್ರದರ್ಶನ

» **ಚಿತ್ರದುರ್ಗ**

ತಾಯಿ ಮರಣ ಮತ್ತು ಶಿಶು ಮರಣ ತಡೆಗಟ್ಟಲು ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳು ಬಹು ಮುಖ್ಯ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು

ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳ ಕುರಿತು ಐಇಸಿ ಕಾರ್ನರ್ ಉದ್ಘಾಟಿಸಿ ಅವರು ಮಾತನಾಡಿದರು.

ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳ ಬಳಕೆಯಿಂದ ಜನಸಂಖ್ಯೆ ನಿಯಂತ್ರಣ ಒಂದೆಡೆಯಾದರೆ ತಾಯಿಯ ಆರೋಗ್ಯ ಸುಧಾರಿಸಿ ಮುಂದೆ ಜನಿಸುವ ಮಗು ಆರೋಗ್ಯವಂತ ಮಗು ಜನಿಸುತ್ತದೆ ಎಂದರು.

ಹೆರಿಗೆ ಮತ್ತು ಸ್ತ್ರೀರೋಗ ತಜ್ಞೆ ಡಾ.ಪವಿತ್ರ ಮಾತನಾಡಿ, ಒಂದು ಮಗುವಿನಿಂದ ಮತ್ತೊಂದು ಮಗುವಿಗೆ ಕನಿಷ್ಠ ಮೂರು ವರ್ಷಗಳ ಅಂತರ ಕಾಯ್ದುಕೊಳ್ಳಲು ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳಾದ ಹೆಣ್ಣು ಮಕ್ಕಳಿಗೆ ಮೂರು ತಿಂಗಳಿಗೊಮ್ಮೆ ಡಿಂಪ ಇಂಜೆಕ್ಷನ್, ವಾರಕ್ಕೊಮ್ಮೆ ಛಾಯಾ ಮಾತ್ರೆ ಹಾಗೂ ಕಾಪರ್ ಟಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಲಭ್ಯ ಇವೆ ಹಾಗೂ ಶಾಶ್ವತ ವಿಧಾನಗಳಾದ ಲೆಪ್ರೋಸ್ಕೋಪಿಕ್, ಟುಬೆಕ್ಟಮಿ ಇವುಗಳ ಸದ್ಬಳಕೆ ಮಾಡಿಕೊಂಡು ಚಿಕ್ಕ ಕುಟುಂಬ ಹೊಂದುವುದರ ಜೊತೆಗೆ ಸಂತಸದ ಜೀವನ ನಡೆಸಬೇಕು ಎಂದು ಹೇಳಿದರು.



ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಜನಸಂಖ್ಯಾ ನಿಯಂತ್ರಣಕ್ಕಾಗಿ ಕುಟುಂಬ ಕಲ್ಯಾಣ ಶಾಶ್ವತ ವಿಧಾನಗಳಲ್ಲಿ ಪುರುಷರಿಗೆ ಎನ್ ಎಸ್ ವಿ ಶಸ್ತ್ರಚಿಕಿತ್ಸೆ ಒಂದು ಸುಲಭ ಸರಳ ವಿಧಾನವಾಗಿದ್ದು, ಹೊಲಿಗೆ ಇಲ್ಲ, ಗಾಯ ಇಲ್ಲ, ಆಸ್ಪತ್ರೆಯಲ್ಲಿ ತಂಗುವ ಹಾಗಿಲ್ಲ, ಪುರುಷತ್ವಕ್ಕೆ ಹಾನಿ ಇಲ್ಲ, ಇಂತಹ ವಿಧಾನಕ್ಕೆ ಪುರುಷರ ಸಹಭಾಗಿತ್ವ ಬಹು ಮುಖ್ಯ ಎಂದು ಹೇಳಿದರು.

ರಕ್ತಹೀನತೆ, ಹೃದಯದ ತೊಂದರೆ, ಇನ್ನಿತರ ಅನಾರೋಗ್ಯ ಸಮಸ್ಯೆ ಇರುವ ತಾಯಂದಿರು ಮಕ್ಕಳು ಬೇಡವೆಂದು ನಿರ್ಧರಿಸಿದಾಗ ತಾವೇ ಶಸ್ತ್ರ ಚಿಕಿತ್ಸೆ ಮಾಡಿಸಿಕೊಳ್ಳುವುದಕ್ಕಿಂತ ತಮ್ಮ ಪತಿಯವರಿಗೆ ಮನವೊಲಿಸಿ ಎನ್‌ಎಸ್‌ವಿ ಶಸ್ತ್ರ ಚಿಕಿತ್ಸೆ ಮಾಡಿಸಿಕೊಂಡು ಸುಖಮಯ ದಾಂಪತ್ಯ ಜೀವನ ನಡೆಸಬಹುದು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಜನಸಂಖ್ಯಾ ಹೆಚ್ಚಳದಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿ ನೀಡಿದರು.

ಆಯುಷ್ ವೈದ್ಯೆ ಡಾ.ಶಿಲ್ಪ, ದಂತ ವೈದ್ಯಾಧಿಕಾರಿ ಡಾ.ಬಿಂದಿಯಾ, ಹಿರಿಯ ಫಾರ್ಮಸಿ ಅಧಿಕಾರಿ ಮೋಹನ್ ಕುಮಾರ್, ಶುಶ್ರೂಷಣಾಧಿಕಾರಿಗಳಾದ ನಾಗವೇಣಿ, ಜ್ಯೋತಿ, ರೇಣುಕಾ. ಶ್ಯಾಮಲಾ, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಕುಮಾರ್, ಆಶಾ ಕಾರ್ಯಕರ್ತೆಯರಾದ ವನಜಾಕ್ಷಮ್ಮ, ಉಮಾದೇವಿ ಹಾಗೂ ಸಾರ್ವಜನಿಕರು ಇದ್ದರು.

ಫಾಸ್ಟ್ ನ್ಯೂಸ್

## ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಸೇವೆ ಶ್ಲಾಘನೀಯ: ಚಂದ್ರಕಾಂತ ಎಸ್. ನಾಗಸಮುದ್ರ



» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ ಇವರು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ 2025-26ನೇ ಸಾಲಿನ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಯೋಗಬಂಧನ, ಯೋಗೋಧ್ಯಾನ,ಯೋಗ ಧನುಷ್, ಯೋಗ ಪ್ರಭಾವ, ಜಠಣಾಣು ಛಿಠಟಿಟಜಛಿಣ, ಯೋಗ ಹರಿತ್, ಜಠಠಚಿ ಣಾಟಿ ಕಟಣಾಠಠಜಜ, ಯೋಗ ಮಹಾಕುಂಭ, ಯೋಗ ಸಂಗಮ್ ಇನ್ನಿತರ ಹಲವು ಕಾರ್ಯಕ್ರಮಗಳಲ್ಲಿ ಆಯುಷ್ ಇಲಾಖೆಯೊಂದಿಗೆ ಸಕ್ರಿಯವಾಗಿ ಪಾಲ್ಗೊಂಡು ನಗರ ಮತ್ತು ಗ್ರಾಮೀಣ ಭಾಗದಲ್ಲಿ ಜನರಲ್ಲಿ ಯೋಗ ಜಾಗೃತಿ ಮೂಡಿಸುವುದರ ಜೊತೆಗೆ ಸಾರ್ವಜನಿಕರಿಗೆ ಉಚಿತ ಯೋಗ ತರಬೇತಿ ಸೇವೆ ನೀಡಿದ್ದಕ್ಕಾಗಿ ಚಿತ್ರದುರ್ಗ ಭಾರತೀಯ ಯೋಗ ಶಿಕ್ಷಣ ಸಂಸ್ಥೆಗೆ ಅತ್ಯುತ್ತಮ ಯೋಗ ಸಂಸ್ಥೆ ಎಂದು ಅಭಿನಂದನಾ ಪತ್ರ ನೀಡಲಾಯಿತು. ಇಂದು ನಗರದ ಜಿಲ್ಲಾ ಆಯುಷ್ ಕಛೇರಿಯಲ್ಲಿ ಅಭಿನಂದನಾ ಪತ್ರ ನೀಡಲಾಯಿತು. ಸಂಸ್ಥೆಯ ಅಧ್ಯಕ್ಷ ಹಾಗೂ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ ಅಭಿನಂದನಾಪತ್ರ ಸ್ವೀಕಾರ ಮಾಡಿದರು.ಅಭಿನಂದನಾ ಪತ್ರ ನೀಡಿ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿ ಚಂದ್ರಕಾಂತ ಎಸ್.ನಾಗಸಮುದ್ರ " 2025-26ನೇ ಸಾಲಿನ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಯುಷ್ ಇಲಾಖೆಯಿಂದ ಚಿತ್ರದುರ್ಗ ಜಿಲ್ಲೆಯಾದ್ಯಂತ ಅದ್ದೂರಿಯಾಗಿ ಆಚರಿಸಲ್ಪಟ್ಟಿದ್ದು. ಜಿಲ್ಲೆಯ ವಿವಿಧ ಯೋಗ ಸಂಘ-ಸಂಸ್ಥೆಗಳ ಸಹಕಾರ ಹಾಗೂ ಸಾರ್ವಜನಿಕರ ಸಹಭಾಗಿತ್ವ ಉತ್ತಮವಾಗಿತ್ತು ಇವುಗಳಲ್ಲಿ ಚಿತ್ರದುರ್ಗದ ಭಾರತೀಯ ಯೋಗ ಶಿಕ್ಷಣ ಸಂಸ್ಥೆಗೆ ಅತ್ಯುತ್ತಮ ಯೋಗ ಸೇವೆಗಾಗಿ ಅಭಿನಂದಿಸುತ್ತಿರುವುದು ಸಂತಸ ತಂದಿದೆ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಯೋಗ ಶಿಕ್ಷಕರು ನಗರ ಮತ್ತು ಗ್ರಾಮೀಣ ಭಾಗಗಳಲ್ಲಿ ಸಾರವಜನಿಕರಲ್ಲಿ ಯೋಗ ಜಾಗೃತಿ ಮೂಡಿಸುವುದರ ಜೊತೆಗೆ ಜಿಲ್ಲಾ ಕಾರಾಗೃಹ ಬಂಧಿ ನಿವಾಸಿಗಳಿಗೆ, ಪೋಲಿಸ್ ತರಬೇತಿ ಪ್ರಶಿಕ್ಷಣಾರ್ಥಿಗಳಿಗೆ ಉಚಿತವಾಗಿ ಉತ್ತಮ ಯೋಗ ತರಬೇತಿ ಸೇವೆಯನ್ನು ನೀಡಿರುತ್ತಾರೆ ಮುಂದಿನ ದಿನಗಳಲ್ಲೂ ಆಯುಷ್ ಇಲಾಖೆಯ ಜೊತೆಗಿನ ಸಹಕಾರ ಹೀಗೇ ಮುಂದುವರಿಯಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯಿಂದ ಇನ್ನೂ ಉತ್ತಮ ಸೇವೆ ಸಮಾಜಕ್ಕೆ ನೀಡುವಂತಾಗಲಿ ಎಂದು ಹಾರೈಸಿದರು.

## ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿಗೆ 1ನೇ ತರಗತಿಯಿಂದ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಮುಸ್ಲಿಂ, ಕ್ರಿಶ್ಚಿಯನ್, ಜೈನ್ , ಬೌದ್ಧ, ಸಿಖ್ ಹಾಗೂ ಪಾರ್ಸಿ ಸಮುದಾಯದ ವಿದ್ಯಾರ್ಥಿಗಳು ಅರ್ಜಿಗಳನ್ನು ಆನ್‌ಲೈನ್ ವೆಬ್‌ಸೈಟ್ https://ssp.karnataka.gov.in ಮೂಲಕ ಅರ್ಜಿ ಸಲ್ಲಿಬಹುದು. ಸೆಪ್ಟೆಂಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ, ತಾಲೂಕು ಮಾಹಿತಿ ಕೇಂದ್ರ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿ ಭೇಟಿ ನೀಡಬಹುದು.

## ಭದ್ರಾ ನದಿಪಾತ್ರದ ಜನರಿಗೆ ಎಚ್ಚರಿಕೆ

» **ದಾವಣಗೆರೆ**

ಭದ್ರಾನದಿ ದಂಡೆಯ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರಿಗೆ ಭದ್ರಾ ಜಲಾಶಯದ ಪ್ರದೇಶದಲ್ಲಿ ಮುಂಗಾರು ಮಳೆ ಪ್ರಾರಂಭವಾಗಿದ್ದು, ಸಾಕಷ್ಟು ಒಳಹರಿವು ಆಗುತ್ತಿದೆ ಮತ್ತು ನೀರಿನ ಸಂಗ್ರಹ ಮಟ್ಟವು ಹೆಚ್ಚಾಗತೊಡಗಿದೆ. ಹರಿದು ಬರುವ ಒಳಹರಿವಿನ ಪ್ರಮಾಣ 20000-25000 ಕ್ಯೂಸೆಕ್ಸ್ ಇದ್ದು, ಅಣೆಕಟ್ಟು ಸುರಕ್ಷತೆ ದೃಷ್ಠಿಯಿಂದ ಹೆಚ್ಚುವರಿ ನೀರನ್ನು ಯಾವ ಸಮಯದಲ್ಲಾದರೂ ಸ್ಪಿಲ್ ವೇ ಗೇಟ್ ಮುಖಾಂತರ ಬೀಡಲಾಗುವುದು, ಭದ್ರಾ ನದಿಯ ಎಡ ಮತ್ತು ಬಲ ದಂಡೆಯ ಉದ್ದಕ್ಕೂ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರು .ಮುಂಜಾಗ್ರತೆಯಾಗಿ ಸುರಕ್ಷಿತ ಸ್ಥಳಗಳಿಗೆ ಹೋಗಬೇಕು. ನದಿ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದು, ಜಾನುವಾರುಗಳನ್ನು ನದಿ ಪಾತ್ರದಲ್ಲಿ ಮೇಯಿಸುವುದನ್ನು ನಿಷೇಧಿಸಲಾಗಿದೆ. ಎಂದು ಕ.ನೀ.ನಿ.ನಿ ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ

# ಒಂದಷ್ಟು ಶುದ್ಧತೆಯೆಡೆಗೆ

**ಸಾವಿನ ಭಯದಿಂದ ತಪ್ಪು ಮಾಡುವುದು ಬಿಡಿ.....**

**ಸೋಲಿನ ಭಯದಿಂದ ಚಿಂತಿಸುವುದನ್ನು ಬಿಡಿ.......**

**ವಿಫಲತೆಯ ಭಯದಿಂದ ಕೊರಗುವುದನ್ನು ಬಿಡಿ......**



ಸಾವು - ಸೋಲು - ವಿಫಲತೆಯ ಭಯ ನಮ್ಮನ್ನು ಜೀವನ ಪೂರ್ತಿ ಹಿಂಡುತ್ತಲೇ ಇರುತ್ತದೆ. ನಾವು ಮಾಡುವ ಬಹುತೇಕ ತಪ್ಪುಗಳು ಇವುಗಳ ಕಾರಣಕ್ಕಾಗಿಯೇ ಆಗಿರುತ್ತದೆ.

ಆಸ್ಪತ್ರೆ ಪೋಲೀಸ್ ನ್ಯಾಯಾಲಯ ದೇವರು ಧರ್ಮ ಸ್ವಾಮಿಗಳು ಎಲ್ಲವುಗಳ ಸುತ್ತ ನಾವು ಸುತ್ತುವುದು ಮತ್ತು ಅನೇಕ ಭ್ರಮಾತ್ಮಕ ಮೌಢ್ಯಗಳಿಗೆ ಒಳಗಾಗುವುದು ಸಹ ಈ ಮೂರರ ಕಾರಣಕ್ಕಾಗಿ.

ಇವುಗಳನ್ನು ಘನತೆಯಿಂದ ಸ್ವೀಕರಿಸುವ, ವಾಸ್ತವವಾಗಿ ಎದುರಿಸುವ, ಸಹಜವಾದ ಕ್ರಿಯೆ ಎನ್ನುವ ಸಾಮಾಜಿಕ ವಾತಾವರಣ ನಮ್ಮ ವ್ಯವಸ್ಥೆಯಲ್ಲಿ ಇಲ್ಲ.

ಮನುಷ್ಯ ಸಂಘ ಜೀವಿ. ಒಂದು ವೇಳೆ ವೈಯಕ್ತಿಕ ನೆಲೆಯಲ್ಲಿ ಇವುಗಳನ್ನು ಸ್ವಾಭಾವಿಕವಾಗಿ ಒಪ್ಪಿಕೊಂಡರು ನಮ್ಮ ಸುತ್ತಮುತ್ತಲಿನ ಜನರ ಪ್ರತಿಕ್ರಿಯೆ ಅತ್ಯಂತ ನಕಾರಾತ್ಮಕವಾಗಿ ಇರುತ್ತದೆ. ಅದನ್ನು ಎದುರಿಸುವುದೇ ಒಂದು ದೊಡ್ಡ ಸವಾಲು.

ಇದು ಹೇಳುವಷ್ಟು ಸುಲಭವಲ್ಲ. ಆದರೆ ನಮ್ಮ ಒಟ್ಟು ವ್ಯಕ್ತಿತ್ವ ಮತ್ತು ಜೀವನಮಟ್ಟ ಸುಧಾರಣೆಯ ದೃಷ್ಟಿಯಿಂದ ಸಾವು ಸೋಲು ಮತ್ತು ವಿಫಲತೆಯ ಭಯವನ್ನು ಮೀರಲೇ ಬೇಕಿದೆ.

ಯಾರೋ ಕೆಲವು ವ್ಯಾವಹಾರಿಕ ವ್ಯಕ್ತಿಗಳ ಯಶಸ್ಸುಗಳನ್ನು ಮಾಧ್ಯಮಗಳಲ್ಲಿ ನೋಡಿ ಅಥವಾ ನಮ್ಮ ಸುತ್ತಮುತ್ತಲಿನ ಅಥವಾ ಪರಿಚಿತರ ಒಂದಷ್ಟು ಆರ್ಥಿಕ ಲಾಭಗಳನ್ನು ನೋಡಿ ನಮ್ಮಲ್ಲಿ ಬೆಳೆಯುವ ಕೀಳರಿಮೆ, ಆಸೆಯಿಂದ ಶ್ರಮದಿಂದ ಮಾಡಿದ ಕೆಲಸದ ಸೋಲು, ಬದುಕಿನ ಒಟ್ಟು ವಿಫಲತೆ ಜೊತೆಗೆ ಸಾವಿನ ಭಯ ನಮ್ಮನ್ನು ಅತ್ಯಂತ ಕೆಳಮಟ್ಟದ ಶರಣಾಗತಿಗೆ ಅಥವಾ ಮನಸ್ಸು ಒಪ್ಪದ ಅಸಹ್ಯ ಹೊಂದಾಣಿಕೆಗೆ ದೂಡುತ್ತದೆ. ವಿಧಿ ಇಲ್ಲ ಅಥವಾ ವಿಧಿಯ ಆಟ ಎಂದು ಸಮಾಧಾನ ಮಾಡಿಕೊಳ್ಳಬಹುದು.



ಜೊತೆಗೆ ನಾವು ಸತ್ತ ನಂತರದ ನಮ್ಮ ಅವಲಂಬಿತರು, ಪ್ರೀತಿ ಪಾತ್ರರು, ವಿರೋಧಿಗಳು ಹೇಗೆ ಬದುಕಬಹುದು ಮತ್ತು ಪ್ರತಿಕ್ರಿಯಿಸಬಹುದು, ನಮ್ಮ ಸೋಲು ಹೇಗೆ ಹೊರಗಿನವರಿಂದ ಕುಹುಕಕ್ಕೆ ಗುರಿಯಾಗಬಹುದು, ನಮ್ಮ ವಿಫಲತೆ ಹೇಗೆ ನಮ್ಮ ಇಡೀ ಬದುಕನ್ನು ಪ್ರಪಾತಕ್ಕೆ ದೂಡಬಹುದು ಎಂಬ ಭಾವನೆಯೇ ನಮ್ಮನ್ನು ಯಶಸ್ಸಿಗಾಗಿ ಹಪಹಪಿಸುವಂತೆ ಮಾಡುತ್ತದೆ. ಈ ಭಯದ ಭಾವನೆಯೇ ನಮ್ಮನ್ನು ಅನೇಕ ತಪ್ಪುಗಳನ್ನು ಮಾಡಲು ಪ್ರೇರೇಪಿಸುತ್ತದೆ. ಏನಾದರೂ ಆಗಲಿ ಸಾಯಬಾರದು, ಸೋಲಬಾರದು ಯಶಸ್ಸು ಆಗಲೇ ಬೇಕು ಎಂದು ನಾವೆಂದೂ ಊಹಿಸದ ಹೀನಾಯ ಕೆಲಸಗಳಿಗೂ ಸಿದ್ದರಾಗುತ್ತೇವೆ. ಇದರಿಂದಾಗಿ ಕೆಲವರು ದುಶ್ಚಟಗಳಿಗೂ ದಾಸರಾಗುತ್ತಾರೆ ಹಾಗೆಯೇ

ತಲೆ ಒಡೆಯಲು ತಲೆ ಹಿಡಿಯಲು ಹೇಸುವುದಿಲ್ಲ. ಭ್ರಷ್ಟಾಚಾರ ನಮಗೆ ಏನೂ ಅನಿಸುವುದಿಲ್ಲ.

ಆದರೆ ಧೈರ್ಯದಿಂದ ಸತ್ತರೆ ಸಾಯಲಿ ಸತ್ತ ನಂತರ ಹೇಗೂ ನನಗೆ ಅರಿವಿರುವುದಿಲ್ಲ ಅಥವಾ ಸೋಲಾಗಲಿ ಅಥವಾ ವಿಫಲವಾಗಲಿ ನನ್ನ ಬದುಕು ನನ್ನ ಆಯ್ಕೆ ಎಂಬ ದೃಢ ನಿರ್ಧಾರಕ್ಕೆ ಬಂದರೆ ಮನಸ್ಸಿನಲ್ಲಿ ಸ್ವಲ್ಪ ಶಾಂತಿ ನೆಮ್ಮದಿ ನೆಲೆಸುತ್ತದೆ.

ಸೂಕ್ಷ್ಮ ಮನಸ್ಸಿನವರು ಇನ್ನೂ ಒಂದು ಹೆಜ್ಜೆ ಮುಂದೆ ಹೋಗಬಹುದು. ಸತ್ತರೆ ಏನಂತೆ ಸೋತರೆ ಏನಂತೆ ಇರುವುದು ಒಂದೇ ಜೀವನ. ಹೆದರುವುದೇಕೆ ಎಂದು ತಮ್ಮಲ್ಲಿರುವ ಸ್ವಲ್ಪ ಭಯದ ಭಾವನೆಯನ್ನು ಕೊಂದುಕೊಳ್ಳಬೇಕು. ಜೊತೆಗೆ ಮಾನ ಮರ್ಯಾದೆ ಎಂಬುದು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ತಮ್ಮ ಸುಖಕ್ಕಾಗಿ ಹುಟ್ಟುಹಾಕಿರುವ ಭ್ರಮೆಗಳು ಎಂದು ಪರಿಗಣಿಸಬೇಕು. ಆಗ ನಿಮ್ಮಲ್ಲಿ ಹೊಸ ವಿನೂತನ ಚೈತನ್ಯ ಮೂಡುತ್ತದೆ. ಹೊಸ ಪ್ರಯೋಗಗಳಿಗೆ ನಮ್ಮನ್ನು ಒಡ್ಡಿಕೊಳ್ಳಬಹುದು.

ಈ ರೀತಿಯ ಧೈರ್ಯ ನಿಮ್ಮಲ್ಲಿ ಉಂಟಾದರೆ ಆಗ ನೀವು ಮೌಢ್ಯಗಳಿಗೆ ದಾಸರಾಗುವುದಿಲ್ಲ, ಲಂಚ ಪಡೆಯುವುದಿಲ್ಲ, ವರದಕ್ಷಿಣೆ ಕೇಳುವುದಿಲ್ಲ, ಇನ್ನೊಬ್ಬರ ಆಸ್ತಿಗೆ ಆಸೆ ಪಡುವುದಿಲ್ಲ. ಆತ್ಮವಂಚನೆ ಮಾಡಿಕೊಳ್ಳುವುದಿಲ್ಲ.ಸ್ವಾಭಿಮಾನ ದಿಂದ ಸ್ವಲ್ಪ ಮಟ್ಟಿಗೆ ನೆಮ್ಮದಿಯಿಂದ ಜೀವನ ಸಾಗಿಸಬಹುದು.

ನೆನಪಿರಲಿ, ಇದೆಲ್ಲವೂ ಒಳ್ಳೆಯ ರೀತಿಯಲ್ಲಿ ನೆಮ್ಮದಿಯ ಬದುಕನ್ನು ಅಪೇಕ್ಷಿಸುವವರಿಗೆ ಮಾತ್ರ.

ದುಷ್ಟತನದ ಕ್ರಿಮಿನಲ್ ಗಳಿಗೆ ಇದು ಯಾವುದೇ ರೀತಿಯಲ್ಲಿಯೂ ಅನ್ವಯಿಸುವುದಿಲ್ಲ.

ಆದ್ದರಿಂದ ಇನ್ನು ಮುಂದೆ ಸಾವು ಸೋಲು ಅಪಯಶಸ್ಸಿನ ಭಯದಿಂದ ತಪ್ಪುಗಳನ್ನು ಮಾಡುವುದು ಬಿಡೋಣ. ಧೈರ್ಯವಾಗಿ ಸ್ವಾಭಿಮಾನದಿಂದ ಸ್ವತಂತ್ರವಾಗಿ ಬದುಕಲು ಪ್ರಯತ್ನಿಸೋಣ........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ.



» **ಲೇಖನ**
**ವಿವೇಕಾನಂದ.**
**ಹೆಚ್.ಕೆ.**
**9844013068**

# ಶಿಕ್ಷಣದಲ್ಲಿನ ಅಸಮಾನತೆ ಹೋಗಲಾಡಿಸುವುದೇ ನನ್ನ ಗುರಿ

» **ದಾವಣಗೆರೆ**

ಶಿಕ್ಷಣದಲ್ಲಿನ ಅಸಮಾನತೆ ಹೋಗಲಾಡಿಸುವುದೇ ನನ್ನ ಜೀವನದ ಗುರಿ ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಘೋಷಿಸಿದರು.

ನಗರದ ನಿಟುವಳ್ಳಿಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಭಗತ್ ಸಿಂಗ್ ಯುವ ಬ್ರಿಗೇಡ್ ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ನೋಟ್ ಬುಕ್ ವಿತರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಎಸ್ ಎಸ್ ಆಸ್ಪತ್ರೆ ವೈದ್ಯ ಸಿಬ್ಬಂದಿಯಿಂದ ಮಕ್ಕಳಿಗೆ ಉಚಿತ ದಂತ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.



ಶಿಕ್ಷಣದಲ್ಲಿನ ಅಸಮಾನತೆ ಹೋಗಬೇಕಿದೆ. ಸರ್ಕಾರಿ ಶಾಲೆಗಳು ಹಾಗೂ ಖಾಸಗಿ ಶಾಲೆಗಳಿಗೂ ಶಿಕ್ಷಣ ಗುಣಮಟ್ಟದಲ್ಲಿ ವ್ಯತ್ಯಾಸ ಇರುತ್ತದೆ. ಎಲ್ಲರೂ ಭಾರತಾಂಬೆಯ ಮಕ್ಕಳು. ಅಂಬಾನಿ, ಅದಾನಿಗೂ ಒಂದೇ ಮತ. ಸಾಮಾನ್ಯ ಪ್ರಜೆಗೂ ಒಂದೇ ಮತ. ಇದು ಪ್ರಜಾಪ್ರಭುತ್ವಕ್ಕೆ ಇರುವ ಶಕ್ತಿ.

ಈ ಮೂಲಕ ರಾಜಕೀಯದಲ್ಲಿ ಸಮಾನತೆ ಇದೆ. ರಾಜಕಾರಣದಲ್ಲಿರುವ ಸಮಾನತೆಯಂತೆ ಶಿಕ್ಷಣದಲ್ಲಿ ಯಾಕೆ ಇಲ್ಲ. ಅಂಬಾನಿ ಮಕ್ಕಳಿಗೆ ಸಿಗುವ ಶಿಕ್ಷಣ ನಿಮಗೂ ಸಿಗಬೇಕು ಎಂದು ಪ್ರತಿಪಾದಿಸಿದರು.

ಜೀವನ ಶೈಲಿ ಬದಲಿಸಿಕೊಳ್ಳಬೇಕು. ಉತ್ತಮ ಸಂಸ್ಕಾರ ಪಡೆಯಬೇಕು, ಒಳ್ಳೆಯ ವ್ಯಕ್ತಿತ್ವ, ಆಕರ್ಷಕ ಗುಣಗಳನ್ನು ನೀವು ಹೊಂದುವ ಜೊತೆಗೆ ಬೇರೆಯವರಿಂದ ಹೇಳಿಸಿಕೊಳ್ಳದೇ ಸ್ವಯಂಪ್ರೇರಿತರವಾಗಿ ನಿರ್ಧರಿಸಿ ಪಠ್ಯ, ಪಠ್ಯೇತರ. ಸಾಹಿತ್ಯ ಸೇರಿದಂತೆ ಇತರೆ ಪುಸ್ತಕಗಳನ್ನು ಓದಿ ಜ್ಞಾನ ಪಡೆದರೆ ಯಶಸ್ಸು ಸಾಧ್ಯವಾಗುತ್ತದೆ. ಇನ್ ಸೈಟ್ಸ್ ಸಂಸ್ಥೆ ದೇಶದ ಮೂಲೆ ಮೂಲೆಗಳಲ್ಲಿ ಇದೆ. ನಾನು ಐಎಎಸ್ ಅಧಿಕಾರಿಯಾಗಬೇಕೆಂಬ ಕನಸು ಕಂಡೆ. ಆದ್ರೆ, ಆಗಲಿಲ್ಲ. ಕೆಎಎಸ್ ಅಧಿಕಾರಿಯಾದೆ. ಪಿಡಿಒ ಆಗಿದ್ದೆ. ಐಎಎಸ್ ಆಗದಿದ್ದರೂ ಸಾವಿರಾರು ಮಕ್ಕಳನ್ನು ಐಎಎಸ್ ಅಧಿಕಾರಿಗಳನ್ನಾಗಿ ಮಾಡಿದ್ದೇನೆ ಎಂಬ ಆತ್ಮತೃಪ್ತಿ ಇದೆ. ಈ ಶಾಲೆಯ ಐವರು ವಿದ್ಯಾರ್ಥಿಗಳು ಮುಂದೆ ಬಂದರೆ ಉಚಿತವಾಗಿ ಐಎಎಸ್ ಕೋಚಿಂಗ್ ನೀಡುತ್ತೇನೆ. ಲಕ್ಷಾಂತರ ರೂಪಾಯಿ ಖರ್ಚಾದರೂ ಪರವಾಗಿಲ್ಲ. ನಾಲ್ಕೈದು ವಿದ್ಯಾರ್ಥಿಗಳಲ್ಲಿ ಆಸಕ್ತಿ ಇದ್ದರೂ ಉಚಿತವಾಗಿ ತರಬೇತಿ ನೀಡುತ್ತೇನೆ ಎಂದು ತಿಳಿಸಿದರು.

ಮನೆಯಲ್ಲಿ ಬಡತನ ಇದೆ, ತಂದೆ ತಾಯಿ ಕೂಲಿ ಕೆಲಸ ಮಾಡುತ್ತಾರೆ, ಅನುಕೂಲ ಇಲ್ಲ ಎಂದುಕೊಳ್ಳಬೇಡಿ. ಸಮಾಜದಲ್ಲಿ ಒಳ್ಳೆಯ ಮನಸುಗಳಿವೆ.

ಸಹಾಯ ಮಾಡಲು ದೊಡ್ಡ ವ್ಯಕ್ತಿಗಳಿದ್ದಾರೆ. ನಿಟುವಳ್ಳಿಯ ಈ ಶಾಲೆಯ ಪ್ರಾಂಶುಪಾಲರು, ಶಿಕ್ಷಕರ ಶ್ರಮದಿಂದ ಈ ಶಾಲೆಯ ಇಷ್ಟೊಂದು ಉತ್ತಮವಾಗಿ ಇದೆ. ಬಣ್ಣ ಬಣ್ಣದ ಬಟ್ಟೆ ಹಾಕಿಕೊಳ್ಳುವುದು ಫ್ಯಾಷನ್. ಆಳವಾದ ಆಸಕ್ತಿ ಹೊಂದುವುದು ಪ್ಯಾಷನ್. ಫ್ಯಾಷನ್ ಜೊತೆಗೆ ಪ್ಯಾಷನ್ ನಿಮ್ಮಲ್ಲಿರಬೇಕು. ಶಿಕ್ಷಕರು ಅತಿವಾದ ಆಸಕ್ತಿಯಿಂದ ಕಲಿಸುತ್ತಿದ್ದಾರೆ. ವಿದ್ಯಾರ್ಥಿಗಳು ಯಶಸ್ಸು ಕಾಣುತ್ತಿದ್ದಾರೆ. ಯಾವುದೇ ಮುಜುಗರ, ಹಿಂಜರಿಕೆ ಇಲ್ಲದೇ ಶಾಲೆಗೆ ಯಾರೇ ಬಂದರೂ ಸಹಾಯ ಕೇಳಿ ಬಂದ ಅನುದಾನವು ದುರುಪಯೋಗವಾಗದೇ ಸದ್ಬಳಕೆಯಾಗುತ್ತಿದೆ.ಇದು ಸಂತಸದ ವಿಚಾರ ಎಂದು ಜಿ. ಬಿ. ವಿನಯ್ ಕುಮಾರ್ ಅವರು ತಿಳಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T